ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ




ಭಾರತೀಯ ಬ್ಯಾಟರ್‌ಗಳು ಐಪಿಎಲ್ ಗುಂಗಿನಿಂದ ಹೊರಬರಬೇಕೆಂದು ಇಂಗ್ಲೆಂಡ್ ತಂಡದ ಬೌಲರ್ ಚೋಫ್ರಾ ಆರ್ಚರ್ ಅವರು ಪಾಠ ಮಾಡಿದರು.

09 ಜುಲೈ, 2026 ಗುರುವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 120 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ರಾಜಕೀಯ ಅನುಕೂಲಕ್ಕೆ ತಮಿಳುನಾಡಿಗೆ ನೀರು » 2




ರಾಜ್ಯಾದ್ಯಂತ ಶೇ. 80.85ರಷ್ಟು ಎಣಿಕೆ ಫಾರಂಗಳನ್ನು ಈಗಾಗಲೇ ಮತದಾರರಿಗೆ ವಿತರಿಸಲಾಗಿದೆ ಎಂದು ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ವಿ ಅನ್ಬುಕುಮಾರ್ ಹೇಳಿದ್ದಾರೆ.



ಮಲೆನಾಡಿನ ಝರಿ-ತೊರೆಗಳಿಗೆ ಜೀವ ಕಳೆ » 4

## ದೆಹಲಿಯಲ್ಲಿ ಮೂರಂತಸ್ತಿನ ಕಟ್ಟಡ ಕುಸಿತ

### ಕೇರಳ ಬಳಿಕ ರಾಷ್ಟ್ರ ರಾಜಧಾನಿಯಲ್ಲಿ ದುರಂತ | ಹಲವರು ಸಾವನ್ನಪ್ಪಿರುವ ಶಂಕೆ

• ಪ್ರಜೋದಯ ವರದಿ

**ನವದೆಹಲಿ:** ದೇಶಾದ್ಯಂತ ಮಳೆಯ ಆರ್ಭಟ ಮುಂದುವರಿದಿದ್ದು, ಕೇರಳದ ವಯನಾಡಿನಲ್ಲಿ ಭೂಕುಸಿತ ಸಂಭವಿಸಿ ಮೂವರು ಮೃತಪಟ್ಟ ಕಹಿ ಘಟನೆ ಮಾಸುವ ಮುನ್ನವೇ ಬುಧವಾರ ದೆಹಲಿಯಲ್ಲಿ ನಿರ್ಮಾಣ ಹಂತದ ಮೂರಂತಸ್ತಿನ ಕಟ್ಟಡ ಕುಸಿದಿದೆ.

ರೋಹಿಣಿ ಪ್ರದೇಶದಲ್ಲಿ ನಿರ್ಮಾಣ ಹಂತದಲ್ಲಿದ್ದ ಕಟ್ಟಡ ಧರೆಗುರುಳಿದೆ. ದುರಂತದ ವೇಳೆ ಕಟ್ಟಡದ ಒಳಗಿದ್ದ ಹಲವು ಕಾರ್ಮಿಕರು ಹಾಗು ಸಾರ್ವಜನಿಕರು ಅವಶೇಷಗಳ ಅಡಿಯಲ್ಲಿ ಸಿಲುಕಿಕೊಂಡಿದ್ದಾರೆ ಎನ್ನಲಾಗಿದೆ. ರೋಹಿಣಿ ಸೆಕ್ಟರ್ 16ರ ಮುನ್ಸಿಪಲ್ ಶಾಲೆಯ ಸಮೀಪ ಸಂಜೆ 4.20ರ ಸುಮಾರಿಗೆ ಈ ಘಟನೆ ಸಂಭವಿಸಿದೆ. ಕಟ್ಟಡ ಕುಸಿಯುತ್ತಿದ್ದಂತೆ ಸ್ಥಳೀಯರು ಧಾವಿಸಿ, ರಕ್ಷಣಾ ಕಾರ್ಯಕ್ಕೆ ಕೈಜೋಡಿಸಿದರು. ಇಬ್ಬರನ್ನು ಅವಶೇಷಗಳಡಿಯಿಂದ ಹೊರ ತೆಗೆಯಲಾಗಿದೆ. ದೆಹಲಿ ಅಗ್ನಿಶಾಮಕ ದಳ ಸ್ಥಳಕ್ಕೆ ನಾಲ್ಕು ವಿಶೇಷ ರಕ್ಷಣಾ



ವಾಹನಗಳನ್ನು ರವಾನಿಸಿತು. ಅವರೊಂದಿಗೆ ದೆಹಲಿ ಪೊಲೀಸ್ ಹಾಗು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಜಂಟಿಯಾಗಿ ಕಾರ್ಯಾಚರಣೆ ನಡೆಸುತ್ತಿವೆ. ದುರಂತ ಸಂಭವಿಸಿದ ತಕ್ಷಣ ಅಗ್ನಿಶಾಮಕ ಸಿಬ್ಬಂದಿ ಬರುವ ಮುನ್ನವೇ ಸ್ಥಳೀಯ ನಿವಾಸಿಗಳು ರಕ್ಷಣೆಗೆ ಮುಂದಾಗಿದ್ದಾರೆ. ಅವಶೇಷಗಳಡಿಯಿಂದ ಕೇಳಿಬರುತ್ತಿದ್ದ ಕಿರುಚಾಟ ಕೇಳಿ, ಲಭ್ಯವಿದ್ದ ಸಲಕರಣೆಗಳ ಮೂಲಕ ಸಿಮೆಂಟ್ ಬ್ಲಾಕ್‌ಗಳು ಮತ್ತು ಕಬ್ಬಿಣದ ಸರಳುಗಳನ್ನು ಪಕ್ಕಕ್ಕೆ ಸರಿಸಲು ಹರಸಾಹಸ ಪಟ್ಟಿದ್ದಾರೆ.

**ವಯನಾಡಿನಲ್ಲಿ ಮುಂದುವರಿದ ಶೋಧ**

ಕೇರಳದ ವಯನಾಡಿನ ಬೆಟ್ಟದ ಜಿಲ್ಲೆಯ ಸುರಂಗ ರಸ್ತೆ ನಿರ್ಮಾಣ ಸ್ಥಳದಲ್ಲಿ ಭೂಕುಸಿತ ಸಂಭವಿಸಿ ಮೂರು ಜೀವಗಳು ಬಲಿಯಾದ ಒಂದು ದಿನದ ನಂತರ ಕಾಣೆಯಾಗಿರುವ ಐವರ ಪತ್ತೆಗೆ ಶೋಧ ಕಾರ್ಯ ಮುಂದುವರೆದಿದೆ.

ವಯನಾಡ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೇವಮನೋಹರ್ ಅವರು ಘಟನೆ ಕುರಿತು ಮಾತನಾಡಿ, ಭೂಕುಸಿತಕ್ಕೆ ಸಂಬಂಧಿಸಿ ಅಸ್ವಾಭಾವಿಕ ಸಾವಿನ ಪ್ರಕರಣವನ್ನು ದಾಖಲಿಸಲಾಗಿದೆ ಮತ್ತು ತನಿಖೆ ಪ್ರಾರಂಭಿಸಲಾಗಿದೆ. ಶ್ವಾನದಳ, ಅಗ್ನಿಶಾಮಕ ದಳದ ಸಿಬ್ಬಂದಿ ಮತ್ತು ಎನ್‌ಡಿಆರ್‌ಎಫ್ ತಂಡಗಳನ್ನು ನಿಯೋಜಿಸಲಾಗಿದೆ. ಹುಡುಕಾಟ ನಡೆಸಲು ಪ್ರದೇಶವನ್ನು ನಾಲ್ಕು ವಲಯಗಳಾಗಿ ವಿಂಗಡಿಸಲಾಗಿದೆ ಎಂದು ಹೇಳಿದರು.

ನದಿಯ ಕೆಳಭಾಗದ ಪ್ರದೇಶಗಳನ್ನು ಸಹ ಶೋಧಿಸಲಾಗುತ್ತಿದೆ. ಚೂರಲ್‌ಮಲಾ ಕಡೆಗೆ ಹೋಗುವ ರಸ್ತೆಯನ್ನು ತೆರವುಗೊಳಿಸಲಾಗಿದೆ. ಘಟನಾ ಸ್ಥಳದಿಂದ ಇನ್ನೂ ಹೆಚ್ಚಿನ ಮಣ್ಣನ್ನು ತೆರವುಗೊಳಿಸಬೇಕಾಗಿದೆ. ಶೋಧ ಕಾರ್ಯಾಚರಣೆಗಳು ಪೂರ್ಣಗೊಂಡ ನಂತರವೇ ಅದನ್ನು ಮಾಡಬಹುದೆಂದು ಅಧಿಕಾರಿ ಹೇಳಿದರು.

ಜಿಲ್ಲಾಡಳಿತ ಮತ್ತು ಲೋಕೋಪಯೋಗಿ ಇಲಾಖೆ ಸಚಿವ ಪಿ.ಕೆ. ಬಶೀರ್ ಅವರ ನಿರ್ದೇಶನಗಳ ಹೊರತಾಗಿಯೂ ನಿರ್ಮಾಣ ಸ್ಥಳದಲ್ಲಿ ಸಂಗ್ರಹವಾದ ಮಣ್ಣನ್ನು ತೆಗೆದು ಹಾಕದ ಕಾರಣ ರಾಜ್ಯ ಸರ್ಕಾರವು ಒಂದು ದಿನದ ಹಿಂದೆ ಇದು ಮಾನವ ನಿರ್ಮಿತ ವಿಪತ್ತು ಎಂದು ವಾದಿಸಿತ್ತು. ನಿರ್ಮಾಣ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಅದನ್ನು ನಿರಾಕರಿಸಿದರು. ಕೆಲಸದ ಸ್ಥಳಕ್ಕಿಂತ ಹೆಚ್ಚು ಎತ್ತರದಲ್ಲಿ ಭೂಕುಸಿತ ಸಂಭವಿಸಿದೆ ಎಂದು ಅವರು ಹೇಳಿದ್ದಾರೆ. ನಿರ್ಮಾಣಕ್ಕಾಗಿ ಕಂಪನಿಗೆ ನೀಡಲಾದ ಭೂಮಿಯಲ್ಲಿ ಇದು ಸಂಭವಿಸಿಲ್ಲ ಮತ್ತು ಅಲ್ಲಿ ಸಂಗ್ರಹವಾದ ಮಣ್ಣು ವಿಪತ್ತಿಗೆ ಕಾರಣವಲ್ಲ ಎಂದಿದ್ದಾರೆ.

ಭಾರೀ ಮಳೆಯ ಮುನ್ಸೂಚನೆಯ ಹಿನ್ನಲೆಯಲ್ಲಿ ಭಾರತೀಯ ಹವಾಮಾನ ಇಲಾಖೆಯು ವಯನಾಡ್ ಮತ್ತು ಕೋಝಿಕ್ಕೋಡ್ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಿದೆ. ಮಲಪ್ಪುರಂ, ಕಣ್ಣೂರು ಮತ್ತು ಕಾಸರಗೋಡು ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಜಾರಿಯಲ್ಲಿದೆ. ಕೇವಲ ಒಂದು ದಿನದಲ್ಲಿ ವೈಥಿರಿಯಲ್ಲಿ 123 ಮಿ.ಮೀ. ಮಳೆಯಾಗಿದೆ.

## ಹುಂಡಿ ಹಣ ಎಣಿಕೆ ವೇಳೆ ಕಳ್ಳತನಕ್ಕೆ ಯತ್ನ

• ಪ್ರಜೋದಯ ವರದಿ

- ವಿಡಿಯೋ ಗ್ರಾಫರ್ ಬಂಧನ
- 1.98 ಲ.ರೂ. ಕಳವು
- ಬೇಲೂರು ಚನ್ನಕೇಶವ ದೇವಸ್ಥಾನದಲ್ಲಿ ಕೃತ್ಯ



**ಬೇಲೂರು:** ಪಟ್ಟಣದ ಚನ್ನಕೇಶವ ದೇವಸ್ಥಾನದಲ್ಲಿ ಬುಧವಾರ ನಡೆದ ಹುಂಡಿ ಎಣಿಕೆ ವೇಳೆ 1.98 ಲ.ರೂ. ಹಣವನ್ನು ಕಳವಿಗೆ ಯತ್ನಿಸಿದ ಆರೋಪದ ಮೇಲೆ ವಿಡಿಯೋಗ್ರಾಫರ್‌ನನ್ನು ಪೊಲೀಸರು ವಶಕ್ಕೆ ಪಡೆದು ತನಿಖೆ ಆರಂಭಿಸಿದ್ದಾರೆ.

ಬುಧವಾರ ಬೆಳಿಗ್ಗೆ ತಹಶೀಲ್ದಾರ್ ಶ್ರೀಧರ ಕಂಕಣವಾಡಿ ಹಾಗು ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಯೋಗೀಶ್ ಅವರ ಸಮ್ಮುಖದಲ್ಲಿ ನಡೆದ ಹುಂಡಿ ಎಣಿಕೆ ಕಾರ್ಯದಲ್ಲಿ ಸರ್ವೋದಯ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು, ಬ್ಯಾಂಕ್ ಹಾಗು ದೇವಸ್ಥಾನದ ಸಿಬ್ಬಂದಿ ತೊಡಗಿದ್ದರು.

ಈ ವೇಳೆ ವಿಡಿಯೋಗ್ರಾಫಿಯ ಜವಾಬ್ದಾರಿ ವಹಿಸಿಕೊಂಡಿದ್ದ ನೀಲಕಂಠ ಎಂಬಾತ 500 ರೂ. ಮುಖ ಬೆಲೆಯ ನೋಟುಗಳನ್ನು ಜರ್ಕಿನೊಳಗೆ ಅಡಗಿಸಿಟ್ಟಿರುವುದನ್ನು ದೇವಸ್ಥಾನದ ಸಿಬ್ಬಂದಿ ಗಮನಿಸಿ ತಮ್ಮ ಮೊಬೈಲ್‌ನಲ್ಲಿ ದೃಶ್ಯ ಸೆರೆ ಹಿಡಿದಿದ್ದಾರೆ ಎನ್ನಲಾಗಿದೆ. ಮಾಹಿತಿ ಪಡೆದ ಪೊಲೀಸರು ತಕ್ಷಣ ಆತನನ್ನು ತಪಾಸಣೆ ನಡೆಸಿದಾಗ ಸುಮಾರು 1.98 ಲ.ರೂ. ಪತ್ತೆಯಾಗಿದೆ. ಆರೋಪಿಯನ್ನು ವಶಕ್ಕೆ ಪಡೆದಿರುವ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

ಈ ಕೃತ್ಯ ಒಬ್ಬ ವ್ಯಕ್ತಿ ಮಾತ್ರ ನಡೆಸಲು ಸಾಧ್ಯವೇ, ಇದರ ಹಿಂದೆ ಬೇರೆಯವರ ಕೈವಾಡವಿದೆಯೇ. ಹಲವು ವರ್ಷಗಳಿಂದ ಹುಂಡಿ ಹಣ ಎಣಿಕೆ ಪ್ರಕ್ರಿಯೆ ಯಾವ ರೀತಿಯಲ್ಲಿ ನಡೆಯುತ್ತಿತ್ತು, ಹಿಂದಿನ ಎಣಿಕೆಗಳನ್ನೂ ಪರಿಶೀಲಿಸಬೇಕಲ್ಲವೇ ಎಂಬ ಪ್ರಶ್ನೆ ಸಾರ್ವಜನಿಕರಿಂದ ಕೇಳಿ ಬರುತ್ತಿವೆ.

» ನಾಲ್ಕನೇ ಪುಟದಲ್ಲಿ

> **ಹುಂಡಿ ಎಣಿಕೆ ವೇಳೆ ಹಣ ಕಳ್ಳತನಕ್ಕೆ ಯತ್ನಿಸಿರುವ ಕುರಿತು ಸಾಕ್ಷ್ಯಾಧಾರಗಳು ಲಭ್ಯವಾಗಿವೆ. ಆರೋಪಿಯನ್ನು ಪೊಲೀಸರಿಗೆ ಒಪ್ಪಿಸಲಾಗಿದ್ದು, ಇದರ ಹಿಂದೆ ಯಾರ ಕೈವಾಡವಿದೆ ಎಂಬುದರ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ಸೂಚಿಸಲಾಗಿದೆ.**
>
> -ಶ್ರೀಧರ ಕಂಕಣವಾಡಿ, ತಹಶೀಲ್ದಾರ್

> **ಪ್ರತಿ ಬಾರಿ ಮುನ್ನೆಚ್ಚರಿಕೆ ಕ್ರಮಗಳೊಂದಿಗೆ ಹುಂಡಿ ಎಣಿಕೆ ನಡೆಸಲಾಗುತ್ತದೆ. ಈ ಬಾರಿಯೂ ವಿಡಿಯೊ ಚಿತ್ರೀಕರಣ, ವಿದ್ಯಾರ್ಥಿಗಳು, ಬ್ಯಾಂಕ್ ಸಿಬ್ಬಂದಿ, ದೇವಸ್ಥಾನದ ಸಿಬ್ಬಂದಿಯ ಸಮ್ಮುಖದಲ್ಲೇ ಎಣಿಕೆ ನಡೆಯುತ್ತಿತ್ತು. ಈ ವೇಳೆ ಆರೋಪಿಯ ಕೃತ್ಯವನ್ನು ಸಿಬ್ಬಂದಿ ಗಮನಿಸಿ ಪೊಲೀಸರಿಗೆ ಮಾಹಿತಿ ನೀಡಿದರು.**
>
> - ಯೋಗೀಶ್, ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ

## ಬಿಸಲೆಘಾಟ್ ರಸ್ತೆಗೆ ಮರ ಉರುಳಿ ಸಂಚಾರ ಸ್ಥಗಿತ

• ಪ್ರಜೋದಯ ವರದಿ


**ಸಕಲೇಶಪುರ:** ತಾಲ್ಲೂಕಿನ ಬಿಸಲೆ ಘಾಟ್‌ನಲ್ಲಿ ಬೃಹತ್ ಗಾತ್ರದ ಮರ ರಸ್ತೆ ಮಧ್ಯೆ ಉರುಳಿ ಬಿದ್ದ ಪರಿಣಾಮ ರಾಜ್ಯ ಹೆದ್ದಾರಿಯಲ್ಲಿ ಸಂಚಾರ ಸ್ಥಗಿತಗೊಂಡಿತ್ತು.

ಅಡ್ಡಹೊಳೆ ಸಮೀಪದ ರಸ್ತೆಗೆ ಮರ ಅಡ್ಡಲಾಗಿ ಬಿದ್ದಿದ್ದ ಪರಿಣಾಮ ಸಕಲೇಶಪುರ, ಬಿಸಲೆ ಹಾಗು ಸುಬ್ರಹ್ಮಣ್ಯವನ್ನು ಸಂಪರ್ಕಿಸುವ ಪ್ರಮುಖ ರಾಜ್ಯ ಹೆದ್ದಾರಿಯ ಎರಡೂ ಬದಿಗಳಲ್ಲಿ ಸಾರಿಗೆ ಬಸ್‌ಗಳು, ಕಾರುಗಳು, ಬೈಕ್‌ಗಳು ಸೇರಿ ನೂರಾರು ವಾಹನಗಳು ಸಾಲುಗಟ್ಟಿ ನಿಂತಿದ್ದವು. ವಾಹನ ಸಂಚಾರ ಬಂದ್ ಆಗಿದ್ದರಿಂದ ಪ್ರಯಾಣಿಕರು ತೊಂದರೆ ಅನುಭವಿಸಿದರು.

ಬೈಕ್ ಸವಾರರು ಉರುಳಿಬಿದ್ದ ಮರದ ಮೇಲಿಂದ ಸುಮಾರು 10ಕ್ಕೂ ಹೆಚ್ಚು ಬೈಕ್‌ಗಳನ್ನು ಮರದ ಮೇಲಿಂದ ದಾಟಿಸಲಾಯಿತು. ಹಲವು ವಾಹನ ಸವಾರರು ಆತಂಕದಲ್ಲಿ ಕಾಲ ಕಳೆಯುವಂತಾಯಿತು.



### ಮರಗಳ ತೆರವು ಕಾರ್ಯದಲ್ಲಿ ಅರಣ್ಯ ಇಲಾಖೆ



**ಸಕಲೇಶಪುರ :** ಬಿರುಗಾಳಿ-ಮಳೆಯಿಂದ ಧರೆಗುರುಳಿದ ಮರಗಳ ತೆರವು ಕಾರ್ಯದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ನಿರತರಾಗಿದ್ದಾರೆ. ಮಳೆಯ ಆರ್ಭಟ, ಕಾಡಾನೆಗಳ ಹಾವಳಿಯ ನಡುವೆಯೂ ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಿ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ವಲಯ ಅರಣ್ಯ ಇಲಾಖೆಯ ಕಾರ್ಯಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ.

ಸಕಲೇಶಪುರ-ಮೂಡಿಗೆರೆ ರಾಜ್ಯ ಹೆದ್ದಾರಿಯ ಪ್ಲಾಂಟರ್ಸ್ ಕ್ಲಬ್ ಸಮೀಪದ ಹಾನುಬಾಳ್ ಬಳಿ ಹಾಗು ಪಟ್ಟಣದ ಇಂದಿರಾ ಕ್ಯಾಂಟೀನ್ ಸಮೀಪ ರಸ್ತೆ ಮೇಲೆ ಬಿದ್ದಿದ್ದ ಮರವನ್ನು ವಲಯ ಅರಣ್ಯಾಧಿಕಾರಿ ಹೇಮಂತ್ ಕುಮಾರ್ ಅವರು ಸಿಬ್ಬಂದಿಯೊಂದಿಗೆ ತೆರವುಗೊಳಿಸಿದರು. ಕೆಲಕಾಲ ಅಸ್ತವ್ಯಸ್ತಗೊಂಡಿದ್ದ ಸಂಚಾರ ಪುನಃ ಆರಂಭವಾಯಿತು.

## ಹಳ್ಳಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಖಡಕ್ ಸೂಚನೆ

### ಅಧಿಕಾರಿಗಳ ತುರ್ತು ಸಭೆಯಲ್ಲಿ ಒಂದು ದಿನ ಗಡುವು ನೀಡಿದ ಶಾಸಕ ಸಿಮೆಂಟ್ ಮಂಜು

• ಪ್ರಜೋದಯ ವರದಿ

**ಸಕಲೇಶಪುರ:** ಭಾರೀ ಮಳೆ ಹಾಗು ಬಿರುಗಾಳಿಯಿಂದ ಸಕಲೇಶಪುರ ಮತ್ತು ಆಲೂರು ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದ್ದು, ಶೀಘ್ರವಾಗಿ ಸಮಸ್ಯೆ ಬಗೆಹರಿಸ ಬೇಕೆಂದು ಶಾಸಕ ಸಿಮೆಂಟ್ ಮಂಜು ಅವರು ಸೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಟ್ಟಣದ ಸೆಸ್ಕ್ ಕಚೇರಿಯಲ್ಲಿ ಬುಧವಾರ ನಡೆದ ತುರ್ತು ಸಭೆಯಲ್ಲಿ ಮಾತನಾಡಿದ ಅವರು, ಹಾನುಬಾಳು, ಹೆತ್ತೂರು, ಯಸಳೂರು, ಬೆಳಗೋಡು ಹಾಗು ಕಸಬಾ ಸೇರಿ ಸಕಲೇಶಪುರದ ವಿವಿಧ ಹೋಬಳಿ ಹಾಗು ಆಲೂರಿನ ಕಾರಗೋಡು, ಮಗ್ಗೆ, ಕುಂದೂರು, ಕೆ.ಹೊಸಕೋಟೆ ಭಾಗಗಳಲ್ಲಿ ವಿದ್ಯುತ್ ಕಂಬಗಳು ಉರುಳಿ ಬಿದ್ದಿರುವುದರಿಂದ ಜನರು ಸಂಕಷ್ಟ ಎದುರಿಸುತ್ತಿರುವ ಬಗ್ಗೆ ಸಮಗ್ರ ಮಾಹಿತಿ ಪಡೆದರು.



ಸಕಲೇಶಪುರ ವ್ಯಾಪ್ತಿಯಲ್ಲಿ 219, ಆಲೂರು ತಾಲ್ಲೂಕಿನಲ್ಲಿ 80 ಕಂಬಗಳು ಹಾನಿಗೊಳಗಾಗಿವೆ. ಗುರುವಾರ ಸಂಜೆಯೊಳಗೆ ಎಲ್ಲೆಡೆ ವಿದ್ಯುತ್ ಸಂಪರ್ಕ ಪುನಃಸ್ಥಾಪಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆಂದರು.

ಸಭೆಯಲ್ಲಿ ಸಿಬ್ಬಂದಿ ಕೊರತೆಯ ವಿಚಾರವೂ ಪ್ರಸ್ತಾಪವಾಗಿದ್ದು, ಸಕಲೇಶಪುರ ವಿಭಾಗದಲ್ಲಿ 80 ಸಿಬ್ಬಂದಿ ಕೊರತೆ ಇರುವ ಮಾಹಿತಿ ಲಭ್ಯವಾಗಿದೆ. ತಾತ್ಕಾಲಿಕವಾಗಿ 40 ಸಿಬ್ಬಂದಿಯನ್ನು ಸಕಲೇಶಪುರಕ್ಕೆ ಹಾಗು 8 ಹೆಚ್ಚುವರಿ ಸಿಬ್ಬಂದಿಯನ್ನು ಆಲೂರು ತಾಲ್ಲೂಕಿನ ಮಗ್ಗೆ ಭಾಗಕ್ಕೆ ನಿಯೋಜಿಸಲು ಅಧಿಕಾರಿಗಳು ಒಪ್ಪಿಗೆ ನೀಡಿದ್ದಾರೆ. ಅಗತ್ಯವಿದ್ದರೆ ಹೊರ ತಾಲ್ಲೂಕುಗಳಿಂದಲೂ ಸಿಬ್ಬಂದಿಯನ್ನು ಕರೆಸಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ ನೀಡಲಾಗಿದೆ. ಮಳೆಗಾಲಕ್ಕೂ ಮುನ್ನವೇ ಜಂಗಲ್ ಕ್ಲಿಯರೆನ್ಸ್ ಕೈಗೊಳ್ಳುವಂತೆ ಸೂಚನೆ ನೀಡಲಾಗಿತ್ತು. ಆದರೂ ಈ ಬಾರಿ ಬಿರುಗಾಳಿ ತೀವ್ರವಾಗಿದ್ದರಿಂದ ಮರಗಳು ವಿದ್ಯುತ್ ತಂತಿ ಹಾಗು ಕಂಬಗಳ ಮೇಲೆ ಬಿದ್ದು ಹೆಚ್ಚಿನ ಹಾನಿಯಾಗಿದೆ ಎಂದು ಅಧಿಕಾರಿಗಳು ವಿವರಿಸಿದರು.

ಸಾರ್ವಜನಿಕರಿಂದ ನಿರಂತರ ದೂರುಗಳು ಬರುತ್ತಿರುವ ಹಿನ್ನಲೆಯಲ್ಲಿ, ರೋಗಿಗಳು, ವಿದ್ಯಾರ್ಥಿಗಳು, ಗರ್ಭಿಣಿಯರಿಗೆ ತೊಂದರೆಯಾಗದಂತೆ ತ್ವರಿತವಾಗಿ ವಿದ್ಯುತ್ ಪೂರೈಕೆಗೆ ಕ್ರಮ ಕೈಗೊಳ್ಳಬೇಕೆಂದು ಶಾಸಕ ಮಂಜು ಸೂಚಿಸಿದರು.

**ದೂರವಾಣಿ ಕರೆಗಳಿಗೆ ಸ್ಪಂದಿಸಿ**

ಕೆಲವು ಜೆಇ ಹಾಗು ಲೈನ್‌ಮನ್‌ಗಳು ಸಾರ್ವಜನಿಕರ ದೂರವಾಣಿ ಕರೆಗಳಿಗೆ ಸ್ಪಂದಿಸುತ್ತಿಲ್ಲವೆಂಬ ದೂರುಗಳು ಕೇಳಿ ಬಂದಿವೆ. ಎಲ್ಲಾ ಅಧಿಕಾರಿಗಳು ಸಾರ್ವಜನಿಕರ ಕರೆಗಳಿಗೆ ಕಡ್ಡಾಯವಾಗಿ ಸ್ಪಂದಿಸಬೇಕು. ಕರೆ ಸ್ವೀಕರಿಸಲು ಸಾಧ್ಯವಾಗದಿದ್ದರೆ ಬಳಿಕ ಕರೆ ಮಾಡಿ ಮಾಹಿತಿ ನೀಡಬೇಕು. ಪ್ರತಿದಿನ ಎಇ ಹಾಗು ಜೆಇಗಳು ಸಮನ್ವಯ ಸಭೆ ನಡೆಸಿ ಸಮಸ್ಯೆಗಳ ಕುರಿತು ಚರ್ಚಿಸಿ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕೆಂದು ನಿರ್ದೇಶನ ನೀಡಿದರು.

ಗ್ರಾಮೀಣ ಭಾಗದ ಜನರು ಜಂಗಲ್ ಕ್ಲಿಯರೆನ್ಸ್ ಹಾಗು ಕಂಬ ಅಳವಡಿಕೆ ಕಾರ್ಯದಲ್ಲಿ ಸ್ವಯಂ ಪ್ರೇರಿತರಾಗಿ ಸಹಕರಿಸುತ್ತಿರುವುದನ್ನು ಶ್ಲಾಘಿಸಿದ ಅವರು, ಸಾರ್ವಜನಿಕರೊಂದಿಗೆ ಉತ್ತಮ ಬಾಂಧವ್ಯ ಬೆಳೆಸಿ ಅವರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆಯೊಂದಿಗೆ ಸೇವೆ ಸಲ್ಲಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಸೆಸ್ಕಾಂ ಅಧೀಕ್ಷಕ ಸುನಿಲ್, ಕಾರ್ಯನಿರ್ವಾಹಕ ಅಭಿಯಂತರ ವೆಂಕಟೇಶ್, ಹಾಸನ ವಿಭಾಗ ಅರ್ಜುನ್ ಹಾಗು ಕೆಪಿಟಿಸಿಎಲ್ ಹಾಸನ ವಿಭಾಗದ ಪ್ರಸನ್ನ ಕೆರೋಡಿ, ಕೆಪಿಟಿಸಿಎಲ್ ಎಇ, ಜೆಇ, ಅರಣ್ಯ ಇಲಾಖೆ ಕುಡಿಯುವ ನೀರು ಹಾಗು ನೈರ್ಮಲ್ಯ ಇಲಾಖೆ ಸೇರಿ ವಿವಿಧ ಅಧಿಕಾರಿಗಳು ಭಾಗವಹಿಸಿದ್ದರು.

## ಶಾರ್ಟ್ ಸರ್ಕ್ಯೂಟ್‌ನಿಂದ ಬಾರ್‌ನಲ್ಲಿ ಬೆಂಕಿ

• ಪ್ರಜೋದಯ ವರದಿ

**ಹಾಸನ:** ಶಾರ್ಟ್ ಸರ್ಕ್ಯೂಟ್‌ನಿಂದ ಏಕಾಏಕಿ ಬೆಂಕಿ ಹೊತ್ತಿ ಕೊಂಡು ನಷ್ಟ ಉಂಟಾಗಿರುವ ಘಟನೆ ನಗರ ಬಸ್ ನಿಲ್ದಾಣ ಸಮೀಪದ ಸುಪ್ರಿಯಾ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಬುಧವಾರ ನಡೆದಿದೆ.

ಅಗ್ನಿಶಾಮಕ ಸಿಬ್ಬಂದಿ ಒಂದು ಗಂಟೆಗೂ ಅಧಿಕ ಕಾಲ ಕಾರ್ಯಾಚರಣೆ ನಡೆಸಿ ಪರಿಸ್ಥಿತಿ ಹತೋಟಿ ತಂದರು. ದಟ್ಟ ಹೊಗೆ ಆವರಿಸಿದ್ದರಿಂದ ಬೆಂಕಿಯ ಪ್ರಮಾಣ ಹೆಚ್ಚಿರಲಿಲ್ಲ. ಹೀಗಾಗಿ ಭಾರೀ ಅನಾಹುತ ತಪ್ಪಿದೆ. ಕಟ್ಟಡದ ಕೆಳ ಮಹಡಿಯಲ್ಲಿ ಅಳವಡಿಸಲಾಗಿದ್ದ ವಿದ್ಯುತ್ ಕೇಬಲ್‌ಗಳಲ್ಲಿ ಶಾರ್ಟ್ ಸರ್ಕ್ಯೂಟ್ ಸಂಭವಿಸಿ ಜಂಕ್ಷನ್ ಬಾಕ್ಸ್ ಹಾಗು ಮೀಟರ್ ಬೋರ್ಡ್ ಭಾಗದಲ್ಲಿ ಬೆಂಕಿ ಹೊತ್ತಿಕೊಂಡಿದೆ. ಸಂಪೂರ್ಣ ನೆಲದಡಿ ಭಾಗ ಹೊಗೆಯಿಂದ ಆವರಿಸಿಕೊಂಡಿದ್ದರಿಂದ ಟಾರ್ಚ್ ಬೆಳಕು ಹಾಕಿದರೂ ಒಂದು ಅಡಿ ದೂರವೂ ಕಾಣದ ಸ್ಥಿತಿ ನಿರ್ಮಾಣವಾಗಿತ್ತು. ಸಾಮಾನ್ಯವಾಗಿ



ಒಳಗೆ ಪ್ರವೇಶಿಸುವುದು ಅಸಾಧ್ಯವಾಗಿದ್ದ ಕಾರಣ ಸಿಬ್ಬಂದಿ ಕೃತಕ ಉಸಿರಾಟದ ಸಾಧನ (ಬ್ರೀದಿಂಗ್ ಅಪರಾಟಸ್) ಧರಿಸಿ ಒಳಗೆ ಪ್ರವೇಶಿಸಿದರು. ಆರಂಭದಲ್ಲಿ ಕಾರ್ಬನ್ ಡೈ ಆಕ್ಸೈಡ್ ಹಾಗು ಡ್ರೈ ಕೆಮಿಕಲ್ ಪೌಡರ್ ಉಪಕರಣಗಳ ಮೂಲಕ ಬೆಂಕಿ ನಂದಿಸಲು ಪ್ರಯತ್ನಿಸಲಾಯಿತು. ನಂತರ ಹೊರಭಾಗದಿಂದ ನೀರು ಸಿಂಪಡಿಸಿ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಯಿತು. ಬೆಂಕಿಯ ತೀವ್ರತೆ ಹೆಚ್ಚಿದ್ದ ಕಾರಣ ಹೆಚ್ಚುವರಿ ಅಗ್ನಿಶಾಮಕ ವಾಹನವನ್ನು ಕರೆಸಿಕೊಳ್ಳಬೇಕಾಯಿತು. ಸತತ ಒಂದು ಗಂಟೆಗೂ ಹೆಚ್ಚು ಕಾಲ ಸಿಬ್ಬಂದಿ ಶ್ರಮಪಟ್ಟು ಬೆಂಕಿ ಹಾಗು ಹೊಗೆಯನ್ನು ನಿಯಂತ್ರಣಕ್ಕೆ ತಂದರು.

## ಜಾತಿ ನಿಂದನೆ, ಹಲ್ಲೆ : ಸರ್ಕಾರಿ ಶಾಲೆ ಶಿಕ್ಷಕಿ ವಿರುದ್ಧ ಆರೋಪ

• ಪ್ರಜೋದಯ ವರದಿ

**ಆಲೂರು:** ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಶಿಕ್ಷಕಿಯೊಬ್ಬರು ವಿದ್ಯಾರ್ಥಿಗಳಿಗೆ ಜಾತಿ ನಿಂದನೆ ಮಾಡಿ ನಿರಂತರ ಹಲ್ಲೆ, ಕಿರುಕುಳ ನೀಡುತ್ತಿದ್ದಾರೆಂಬ ಗಂಭೀರ ಆರೋಪ ಕೇಳಿ ಬಂದಿದೆ.

ಕನ್ನಡ ವಿಷಯದ ಸಹ ಶಿಕ್ಷಕಿ ಹೆಚ್.ಕೆ.ಕುಸುಮಾ ವಿರುದ್ಧ ವಿದ್ಯಾರ್ಥಿ ಹಾಗು ಪೋಷಕರು ದೂರಿದ್ದು, ಅವರ ವರ್ಗಾವಣೆಗೆ ಆಗ್ರಹಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗೆ ಆಗ್ರಹಿಸಿದ್ದಾರೆ. ಘಟನೆ ಕುರಿತು ವಿದ್ಯಾರ್ಥಿ ಗೋಪಾಲಕೃಷ್ಣ ಮಾತನಾಡಿ, ಶಾಲೆಗೆ ಬಂದಾಗ ಹೋಮ್ ವರ್ಕ್ ಎರಡು ನಿಮಿಷ ತಡವಾಗಿ ಇಟ್ಟಿದಕ್ಕೆ ನನಗೆ ಕಾಪಾಳಕ್ಕೆ ಹೊಡೆದು ನಮ್ಮ ಅಪ್ಪ-ಅಮ್ಮನಿಗೆ ಬೈಯ್ದರು. ಬಿಟ್ಟಿ ಮೊಟ್ಟೆ, ಊಟಕ್ಕೆ ಬರುತ್ತೀರಾ ನೀವು ಹೊಲಸು ಜಾತಿಯವರು. ನಿಮ್ಮಿಂದ ನಾನು ಆಸ್ಪತ್ರೆಗೆ ಹೋಗಿ ಎಂಟು ಸಾವಿರ ರೂ. ಮಾತ್ರೆ ತೆಗೆದುಕೊಳ್ಳಬೇಕಾಯಿತು. ನಿಮ್ಮ ಅಪ್ಪ-ಅಮ್ಮನಿಗೆ ಬಂದು ಪಾಠ ಮಾಡೋಕೆ ಹೇಳಿ ಎಂದು ಕೆಟ್ಟದಾಗಿ ಮಾತುನಾಡುತ್ತಾರೆ. ನಮಗೆ ಕನ್ನಡದಲ್ಲಿ ಏನು ಪಾಠಗಳನ್ನೇ ಮಾಡಿಲ್ಲ. ನಿತ್ಯ ಬಂದರೆ ಅವರ ಸಮಯ ಮುಗಿಯುವವರೆಗೂ ಬೈದು ಜಗಳವಾಡಿ ಹೋಗುತ್ತಾರೆಂದು ಅಸಮಾಧಾನ ವ್ಯಕ್ತಪಡಿಸಿದರು.



ವಿದ್ಯಾರ್ಥಿನಿ ಗಾನವಿ ಮಾತನಾಡಿ, ವಿದ್ಯಾರ್ಥಿನಿಯರು ಎಂಬುದನ್ನು ಗಮನಿಸದೆ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾರೆ. ಬಿಟ್ಟಿ ತಿನ್ನುವುದಕ್ಕೆ ಬರುತ್ತೀರಾ ಎನ್ನುತ್ತಾರೆ. ಪ್ರಾಂಶುಪಾಲರಿಗೆ ದೂರು ನೀಡಲು ಹೋದರೆ ನಾನು ನಿಮ್ಮ ಹೆಸರು ಬರೆದಿಟ್ಟು ನೇಣು ಹಾಕಿಕೊಳ್ಳುತ್ತೇನೆ, ವಿಷ ಕುಡಿಯುತ್ತೇನೆಂದು ಹೆದರಿಸುತ್ತಾರೆ. ಹಲವಾರು ಬಾರಿ ಶಾಲೆಯ ಮುಖ್ಯೋಪಾಧ್ಯಾಯ ಹಾಗು ಶಿಕ್ಷಣಾಧಿಕಾರಿ ತಹಶೀಲ್ದಾರ್ ಅವರು ಬಂದು ಯಾರು ಕೂಡ ಕ್ರಮ ಕೈಗೊಂಡಿಲ್ಲ. ಮಕ್ಕಳ ಸಹಾಯವಾಣಿಗೆ

» ನಾಲ್ಕನೇ ಪುಟದಲ್ಲಿ

## ಮಹನೀಯರ ತತ್ವಾದರ್ಶ ಪಾಲಿಸೋಣ

### ಕೆಂಪೇಗೌಡರ ಜಯಂತಿಯಲ್ಲಿ ಶಂಭುನಾಥ ಶ್ರೀ ಕರೆ



• ಪ್ರಜೋದಯ ವರದಿ

**ಆಲೂರು:** ಸ್ವಸ್ಥ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಮಹನೀಯರ ಆಚರಣೆಗಳು ಕೇವಲ ಒಂದು ದಿನಕ್ಕೆ ಸೀಮಿತವಾಗದೆ ಅವರು ನೀಡಿದ ಸಂದೇಶವನ್ನು ನಿತ್ಯ ಪಾಲಿಸುವ ಕೆಲಸ ಆಗಬೇಕೆಂದು ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.

ಪಟ್ಟಣದ ಒಕ್ಕಲಿಗರ ಸಮುದಾಯ ಭವನದಲ್ಲಿ ತಾಲ್ಲೂಕು ಒಕ್ಕಲಿಗರ ಸಂಘ, ಒಕ್ಕಲಿಗ ಯುವ ಬ್ರಿಗೇಡ್ ಹಾಗು ವಿವಿಧ ಸಂಘ ಸಂಸ್ಥೆಗಳಿಂದ ಬುಧವಾರ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 517ನೇ ಜಯಂತ್ಯುತ್ಸವದಲ್ಲಿ ಆಶೀರ್ವಚನ ನೀಡಿದ ಅವರು, ಕೆಂಪೇಗೌಡರು ಎಲ್ಲಾ ಸಮುದಾಯಗಳಿಗೆ ಸಮಾನ ಗೌರವ ನೀಡಿದ ದೂರದೃಷ್ಟಿಯ ನಾಯಕ. ರೈತರಾಗಿದ್ದ ಅವರು ಬೆಂಗಳೂರಿನಂತಹ ಮಹಾನಗರ ನಿರ್ಮಾಣದ ರಾಜ್ಯದ ಅಭಿವೃದ್ಧಿಗೆ ತಮ್ಮದೇಯಾದ ಕೊಡುಗೆ ನೀಡಿದರು. 500 ವರ್ಷಗಳ ಹಿಂದೆಯೇ ಭವಿಷ್ಯದ ದೃಷ್ಟಿಯಿಂದ ನಗರದಲ್ಲಿ 1500 ಕೆರೆ ಕಟ್ಟೆಗಳನ್ನು ನಿರ್ಮಿಸಿ ನೀರಿನ ದಾಹ ಇಂಗಿಸಿದ ಖ್ಯಾತಿ ಕೆಂಪೇಗೌಡರಿಗೆ ಸಲ್ಲುತ್ತದೆ. ಕೆಂಪೇಗೌಡರಂತಹ ಮಹಾನ್ ನಾಯಕರ ಕೊಡುಗೆಯಿಂದ ಇಂದು ಕರ್ನಾಟಕವನ್ನು ವಿಶ್ವವೇ ಬೆರಗುಗಣ್ಣಿನಿಂದ ನೋಡುತ್ತಿದೆ ಎಂದರು.

ಸಂಸದ ಶ್ರೇಯಸ್ ಪಟೇಲ್ ಅವರು ಮಾತನಾಡಿ, ಬೆಂಗಳೂರು ನಗರವನ್ನು ನಿರ್ಮಿಸಿ ಕರ್ನಾಟಕವನ್ನು ಜಾಗತಿಕ ಮಟ್ಟದಲ್ಲಿ ಗುರುತಿಸುವಂತೆ ಮಾಡಿದ ಕೀರ್ತಿ ಕೆಂಪೇಗೌಡರಿಗೆ ಸಲ್ಲುತ್ತದೆ. ಕೆಂಪೇಗೌಡರ ಗೌರವಾರ್ಥವಾಗಿ ದೇವನಹಳ್ಳಿ ಬಳಿ ಇರುವ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಅವರ ಹೆಸರಿಡಲಾಗಿದೆ ಎಂದರು.

ಶಾಸಕ ಸಿಮೆಂಟ್ ಮಂಜು ಅವರು ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ಇತಿಹಾಸವನ್ನು ಅರಿಯದವನು ಇತಿಹಾಸ ಸೃಷ್ಟಿಸಲಾರೆಂದು ಹೇಳಿದ್ದಾರೆ. ಅದಕ್ಕೆ ಕೆಂಪೇಗೌಡರು ಸಾಕ್ಷಿಯಾಗುತ್ತಾರೆಂದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಎಚ್.ಎಲ್.ಮಲ್ಲೇಶಗೌಡ ಅವರು ಉಪನ್ಯಾಸ ನೀಡಿದರು.

**ಆಕರ್ಷಕ ಮೆರವಣಿಗೆ**

ನಾಡಪ್ರಭು ಕೆಂಪೇಗೌಡರ ಜಯಂತಿ ಅಂಗವಾಗಿ ಪಟ್ಟಣದಲ್ಲಿ ಆಕರ್ಷಕ ಮೆರವಣಿಗೆ ಏರ್ಪಡಿಸಲಾಗಿತ್ತು. ಡಿಜೆ ಸಂಗೀತ ಮತ್ತು ವೀರಗಾಸೆ ಕುಣಿತಕ್ಕೆ ಸಮುದಾಯದ ಬಂಧುಗಳು ಕುಣಿದು ಕುಪ್ಪಳಿಸಿದರು. ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು.

ಶಾಸಕ ಸಿ.ಎನ್.ಬಾಲಕೃಷ್ಣ, ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್, ಸಕಲೇಶಪುರ ತಾಲ್ಲೂಕು ಗ್ಯಾರಂಟಿ ಅನುಷ್ಟಾನ ಸಮಿತಿ ಅಧ್ಯಕ್ಷ ಮುರಳಿ ಮೋಹನ್, ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಹೆಚ್.ಪಿ.ಮೋಹನ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ರಘುಗೌಡ, ಬಾಗೂರು ಮಂಜೇಗೌಡ, ಉಪ ತಹಶೀಲ್ದಾರ್ ರಮೇಶ್, ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಹೆಚ್.ಪಿ. ಮೋಹನ್, ಉಪಾಧ್ಯಕ್ಷ ಕೆ.ಎಸ್. ಮಂಜೇಗೌಡ, ಖಜಾಂಚಿ ಶಾಂತಕೃಷ್ಣ, ವೀರಶೈವ ಮಹಾಸಭಾ ಅಧ್ಯಕ್ಷ ಬಿ.ರೇಣುಕಪ್ರಸಾದ್, ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾ ಅಧ್ಯಕ್ಷ ಅಜಿತ್, ದಲಿತ ಮುಖಂಡರಾದ ವೆಂಕಟಯ್ಯ, ಬಸವರಾಜು, ಕನ್ನಡ ಸಾಹಿತ್ಯ ಪರಿಷತ್ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು, ಮಾಜಿ ಅಧ್ಯಕ್ಷ ಉದಯ ರವಿ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಸಿ.ವಿ.ಲಿಂಗರಾಜು, ನಟರಾಜ್ ನಾಕಲಗೂಡು, ಪಿ.ಎಲ್. ಲಿಂಗರಾಜು, ರಾಜಪ್ಪಗೌಡ ಕದಾಳು, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಪೃಥ್ವಿ ಜಯರಾಮ್ ಇತರರಿದ್ದರು.

## ತಗ್ಗಿದ ಮಳೆ ಅಬ್ಬರ : ಮಲೆನಾಡು, ಅರೆಮಲೆನಾಡಿನಲ್ಲಿ ಸಾಧಾರಣ ಮಳೆ

• ಪ್ರಜೋದಯ ವರದಿ


**ಹಾಸನ :** ಮಲೆನಾಡಿನಲ್ಲಿ ವಾರದಿಂದ ಎಡಬಿಡದೆ ನಿರಂತರವಾಗಿ ಸುರಿದ ಮಳೆ ಬುಧವಾರ ಕೊಂಚ ಬಿಡುವು ನೀಡಿತ್ತು. ಆದರೆ, ಮಂಗಳೂರು-ಬೆಂಗಳೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ 75ರ ಶಿರಾಡಿಘಾಟ್‌ನ ಹಲವೆಡೆ ಗುಡ್ಡ ಕುಸಿಯುವ ಭೀತಿ ಆವರಿಸಿದೆ.

ದೊಡ್ಡತಪ್ಲು ಬಳಿ ರಸ್ತೆ ಕಾಮಗಾರಿ ಬಾಕಿ ಇರುವುದರಿಂದ ಗುಡ್ಡದ ಮಣ್ಣು ಕುಸಿಯುತ್ತಿದ್ದರೂ, ವಾಹನ ಸಂಚಾರಕ್ಕೆ ಆತಂಕ ಎದುರಾಗಿಲ್ಲ. ಹೆದ್ದಾರಿಯ ಮತ್ತೊಂದು ಪಥದ ರಸ್ತೆಯು ಮುಕ್ತವಾಗಿದ್ದು, ಸದ್ಯಕ್ಕೆ ವಾಹನಗಳ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ಹೆದ್ದಾರಿ ಪ್ರಾಧಿಕಾರ ಮತ್ತು ಪೊಲೀಸರು ಸುರಕ್ಷತಾ ಕ್ರಮಗಳನ್ನು ಕೈಗೊಂಡಿದ್ದಾರೆ.

ಬೇಲೂರು ತಾಲ್ಲೂಕಿನಲ್ಲಿ ಬಿರುಗಾಳಿ ಸಹಿತ ಭಾರೀ ಮಳೆಯಾಗುತ್ತಿದ್ದು, ಮುಂಜಾಗ್ರತೆ ಕ್ರಮವಾಗಿ ಅರೇಹಳ್ಳಿ ಬಿಕ್ಕೋಡು, ಚೀಕನಹಳ್ಳಿ ಹೋಬಳಿಗಳು, ಕಸಬಾ (ಎ), ಕಸಬಾ (ಬಿ) ವಲಯದ ಎಲ್ಲಾ ಅಂಗನವಾಡಿ, ಪ್ರಾಥಮಿಕ, ಹಾಗು ಪ್ರೌಢಶಾಲೆಗಳಿಗೆ ಬುಧವಾರವೂ ರಜೆ ಘೋಷಿಸಲಾಗಿತ್ತು. ಮಳೆಯ ಹಿನ್ನಲೆ ಮಂಗಳವಾರವೂ ರಜೆ ನೀಡಿದ್ದರಿಂದ ಶನಿವಾರ ಪೂರ್ತಿ ದಿನ ಶಾಲೆ ನಡೆಸುವಂತೆ ತಹಶೀಲ್ದಾರ್ ಶ್ರೀಧರ್ ಕಂಕನವಾಡಿ ಅವರು ಆದೇಶ ನೀಡಿದ್ದಾರೆ.

ಸಕಲೇಶಪುರ, ಅರಕಲಗೂಡು, ಆಲೂರು ತಾಲ್ಲೂಕು ಭಾಗದಲ್ಲಿ ಮಳೆಯ ಅಬ್ಬರ ಕಡಿಮೆಯಾಗಿದ್ದರೂ ನಿರಂತರವಾಗಿ ಸಾಧಾರಣ ಮಳೆಯಾಗುಗುತ್ತಿದೆ. ನಗರದಲ್ಲಿ ಮೋಡ ಕವಿದಿದ್ದು, ಚದುರಿದಂತೆ ಮಳೆಯಾಗುತ್ತಿದೆ.

### ಸರ್ಕಾರಿ ಶಾಲೆಯ ಛಾವಣಿ ಕುಸಿತ: ತಪ್ಪಿದ ಅನಾಹುತ



**ಹಾಸನ:** ಗಾಳಿ-ಮಳೆಯ ಪರಿಣಾಮ ತಾಲ್ಲೂಕಿನ ದುದ್ದ ಹೋಬಳಿಯ ಬಿಟ್ಟಹಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಛಾವಣಿ ಹೆಂಚುಗಳ ಸಮೇತ ಬುಧವಾರ ಬೆಳಿಗ್ಗೆ ಕುಸಿದು ಬಿದ್ದಿದೆ.

ಶಾಲೆ ಆರಂಭವಾಗುವ ಮುನ್ನವೇ ಈ ಘಟನೆ ಸಂಭವಿಸಿದ್ದರಿಂದ ಭಾರೀ ಅನಾಹುತ ತಪ್ಪಿದೆ. ಶಾಲೆ ಆರಂಭವಾಗಿದ್ದರೆ ವಿದ್ಯಾರ್ಥಿಗಳ ಮೇಲೆ ಹೆಂಚುಗಳು ಬೀಳುವ ಸಾಧ್ಯತೆ ಇತ್ತು. ಘಟನೆ ಬಗ್ಗೆ ಗ್ರಾಮಸ್ಥರು ಶಾಲೆಯ ಮುಖ್ಯ ಶಿಕ್ಷಕರಿಗೆ ಮಾಹಿತಿ ನೀಡಿದ್ದಾರೆ. ಅಧಿಕಾರಿಗಳು ಪರಿಶೀಲಿಸಿ, ಶಾಲೆಗೆ ರಜೆ ನೀಡಿದರು. ಈ ಶಾಲೆಯಲ್ಲಿ 15ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂ ಗ ಮಾಡುತ್ತಿದ್ದು, ಮೂವರು ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಛಾವಣಿ ಕುಸಿದಿರುವ ಹಿನ್ನಲೆ ಶಾಲೆಯ ಸುರಕ್ಷತೆ ಕುರಿತು ಗ್ರಾಮಸ್ಥರು ಕಳವಳ ವ್ಯಕ್ತಪಡಿಸಿ, ಕಟ್ಟಡದ ದುರಸ್ತಿ ಅಥವಾ ಹೊಸ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

### ಹೇಮಾವತಿಗೆ 16,593 ಕ್ಯೂಸೆಕ್ ಒಳಹರಿವು

ಚಿಕ್ಕಮಗಳೂರು, ಮೂಡಿಗೆರೆ ಭಾಗದಲ್ಲೂ ಭಾರೀ ಮಳೆ ಸುರಿಯುತ್ತಿರುವ ಹಿನ್ನಲೆಯಲ್ಲಿ ಹೇಮಾವತಿ ಜಲಾಶಯದ ಒಳ 'ಹರಿವಿನಲ್ಲಿ ಬಾರಿ ಏರಿಕೆಯಾಗಿದ್ದು, 16,593 ಕ್ಯೂಸೆಕ್ ನೀರು ಹರಿದು ಬರುತ್ತಿದೆ. 37.103 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುವ ಹೇಮಾವತಿ ಜಲಾಶಯದಲ್ಲಿ 18.782 ಟಿಎಂಸಿ ನೀರು ಸಂಗ್ರಹವಾಗಿದೆ. ಜಲಾಶಯದ ಗರಿಷ್ಠ ನೀರಿನ ಮಟ್ಟ 2922.00 ಅಡಿಗಳಾಗಿದ್ದು, ಸದ್ಯ 2898.40 ಅಡಿಯಷ್ಟು ನೀರು ಸಂಗ್ರಹವಾಗಿದೆ.

ಕರ್ನಾಟಕ ಸರ್ಕಾರ



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

# ಮತದಾನದ ಹಕ್ಕು ಜೀವನದ ಹಕ್ಕು ಇದನ್ನು ಕಳೆದುಕೊಳ್ಳಬೇಡಿ



ನಿಮ್ಮ ಗಣತಿ ನಮೂನೆಯನ್ನು
ನಿಮ್ಮ ಬೂತ್ ಮಟ್ಟದ ಅಧಿಕಾರಿ (BLO) ಗೆ
ಇಂದೇ ಸಲ್ಲಿಸಿ

## ಸಲ್ಲಿಸಲು ಕೊನೆಯ ದಿನಾಂಕ 29.07.2026

### ಗಣತಿ ನಮೂನೆ ಇಲ್ಲವೇ?

https://voters.eci.gov.in/
ಆನ್‌ಲೈನ್‌ನಲ್ಲಿ ಭರ್ತಿ ಮಾಡಿ ಮತ್ತು ಸಲ್ಲಿಸಿ
ಶೀಘ್ರ. ಸುರಕ್ಷಿತ. ಸುಲಭ.


### ECINET ಆಪ್ ಡೌನ್ಲೋಡ್ ಮಾಡಿ

App Store

Play Store

## ನಿಮ್ಮ ಗಣತಿ ನಮೂನೆ ಆನ್‌ಲೈನ್‌ನಲ್ಲಿ ಸಲ್ಲಿಸಲು 4 ಸುಲಭ ಹಂತಗಳು


1




**ಗಣತಿ ನಮೂನೆ ಭರ್ತಿ ಮಾಡಿ**

SIR-2026 ಪುಟದಲ್ಲಿ "ಗಣತಿ ನಮೂನೆಯನ್ನು ಭರ್ತಿ ಮಾಡಿ" ಎಂಬುವುದನ್ನು ಕ್ಲಿಕ್ ಮಾಡಿ.


2




**"ಸೈನ್-ಅಪ್" ಮೊಬೈಲ್ ಸಂಖ್ಯೆ ಮತ್ತು OTP ದಾಖಲಿಸಿ**

"ಸೈನ್-ಅಪ್" ಕ್ಲಿಕ್ ಮಾಡಿ ನಿಮ್ಮ ಮೊಬೈಲ್ ಸಂಖ್ಯೆ / EPIC ಸಂಖ್ಯೆಯನ್ನು ನಮೂದಿಸಿ, ಕ್ಯಾಪ್ಚಾವನ್ನು ಭರ್ತಿ ಮಾಡಿ ಮತ್ತು OTP ಗಾಗಿ ವಿನಂತಿಸಿ.


3




**ಮತದಾರರ ವಿವರಗಳನ್ನು ಪಡೆಯಲು ರಾಜ್ಯವನ್ನು ಆಯ್ಕೆ ಮಾಡಿ ಮತ್ತು EPIC ಸಂಖ್ಯೆಯನ್ನು ನಮೂದಿಸಿ**

ನಿಮ್ಮ ರಾಜ್ಯವನ್ನು ಆಯ್ಕೆ ಮಾಡಿ, ನಿಮ್ಮ EPIC ಸಂಖ್ಯೆಯನ್ನು ನಮೂದಿಸಿ ಮತ್ತು ನಿಮ್ಮ ವಿವರಗಳನ್ನು ಹುಡುಕಿ

4




**2002ರ ಮತದಾರರ ಪಟ್ಟಿಯಲ್ಲಿ ನಮೂದನ್ನು ಹುಡುಕಿ ನಮೂದಿಸಿದ ನಂತರ ಗಣತಿ ನಮೂನೆಯನ್ನು ಭರ್ತಿ ಮಾಡಿ**

ಗಣತಿ ನಮೂನೆಯನ್ನು ಎಚ್ಚರಿಕೆಯಿಂದ ಭರ್ತಿ ಮಾಡಿ ವಿವರಗಳನ್ನು ಪರಿಶೀಲಿಸಿ ಮತ್ತು ಆನ್‌ಲೈನ್‌ನಲ್ಲಿ ಸಲ್ಲಿಸಿ.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗ ಹಾಗೂ ಬ್ರಾಹ್ಮಣ ಸಮುದಾಯದವರ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

# ಮಲೆನಾಡಿನ ಝರಿ-ತೊರೆಗಳಿಗೆ ಜೀವಕಳೆ

## ರಾಷ್ಟ್ರೀಯ ಹೆದ್ದಾರಿಯಲ್ಲಿ ಕಿರು ಜಲಪಾತಗಳು ಸೃಷ್ಟಿ | ವೀಕ್ಷಣೆಗೆ ಸಾರ್ವಜನಿಕರು, ಪ್ರವಾಸಿಗಳಿಗೆ ನಿರ್ಬಂಧ

• ಪ್ರಜೋದಯ ವರದಿ

**ಹಾಸನ:** ಮಲೆನಾಡು ಭಾಗದಲ್ಲಿ ಎಡೆಬಿಡದೆ ಸುರಿದ ಮಳೆಯಿಂದಾಗಿ ಕಿರು ಜಲಪಾತಗಳು ಸೃಷ್ಟಿಗೊಂಡು, ಝರಿ-ತೊರೆಗಳಿಗೆ ಜೀವ ಕಳೆ ಬಂದಿದೆ.

ಸಕಲೇಶಪುರ ತಾಲ್ಲೂಕಿನ ದೋಣಿಗಾಲ್‌ನಿಂದ ಅಡ್ಡಹೊಳೆಯವರೆಗೂ ರಾಷ್ಟ್ರೀಯ ಹೆದ್ದಾರಿಯಲ್ಲಿ ಹಲವು ಫಾಲ್ಸ್‌ಗಳು ಕಾಣ ಸಿಗುತ್ತಿವೆ. ರಸ್ತೆಯುದ್ದಕ್ಕೂ ಸಾಲು ಸಾಲು ಫಾಲ್ಸ್‌ಗಳಲ್ಲಿ ಹಾಲಿನಂತೆ ಎತ್ತರದಿಂದ ನೀರು ಧುಮ್ಮಿಕ್ಕುತ್ತಿದೆ.

ಶಿರಾಡಿಘಾಟ್ ರಸ್ತೆಯಲ್ಲಿ ಕಿರು ಜಲಪಾತಗಳು ಪ್ರವಾಸಿಗರನ್ನು ಕೈ ಬೀಸಿ ಕರೆಯುತ್ತಿದ್ದು, ವಾಹನಗಳನ್ನು ನಿಲ್ಲಿಸಿ ಸೆಲ್ಫಿ ಕ್ಲಿಕ್ಕಿಸಿಕೊಂಡು ಸಂಭ್ರಮಿಸುತ್ತಿದ್ದಾರೆ. ಮಳೆ, ಮಂಜಿನ ನಡುವೆ ಪ್ರಯಾಣಿಸುವಾಗ ಕಿರುಜಲಪಾತಗಳು ಕಾಣ ಸಿಗುತ್ತಿವೆ. ಬಡವರ ಊಟಿ ಎಂದೇ ಪ್ರಸಿದ್ಧಿಯಾಗಿರುವ ಸಕಲೇಶಪುರ ತಾಲ್ಲೂಕಿನಲ್ಲಿ ಮಳೆಗಾಲದಲ್ಲಿ ಪ್ರವಾಸಿಗರ ಪ್ರಮುಖ ಆಕರ್ಷಣಾ ಕೇಂದ್ರವಾಗಿ ಮಾರ್ಪಡುತ್ತದೆ.

ಹಸಿರು ಬೆಟ್ಟಗಳು, ದಟ್ಟ ಅರಣ್ಯ, ಮಂಜಿನ ಹೊದಿಕೆ, ಹರಿಯುವ ತೊರೆಗಳು ಹಾಗೂ ಧುಮ್ಮಿಕ್ಕುವ ಜಲಪಾತಗಳು ವೀಕ್ಷಣೆಗೆ ವಾರಾಂತ್ಯದ ರಜೆಯನ್ನು ಕಳೆಯಲು ಹೆಚ್ಚಿನ ಸಂಖ್ಯೆಯಲ್ಲಿ ಸಕಲೇಶಪುರದತ್ತ ಮುಖ ಮಾಡುತ್ತಿದ್ದಾರೆ. ಮೂಕನ ಮನೆ ಫಾಲ್ಸ್ ಸೇರಿ ಅನೇಕ ಜಲಪಾತಗಳು ಭರ್ತಿಯಾಗಿ ಹರಿಯುತ್ತಿದ್ದು, ಪ್ರಕೃತಿಯ ರಮಣೀಯತೆಗೆ ಮತ್ತಷ್ಟು ಮೆರುಗು ತಂದಿವೆ.


ಪ್ರಕೃತಿಯ ಈ ಸೊಬಗಿನ ನಡುವೆ ಅಪಾಯವೂ ಅಡಗಿದೆ. ನಿರಂತರ ಮಳೆಯಿಂದಾಗಿ ಕಲ್ಲುಗಳ ಮೇಲೆ ಪಾಚಿ ಬೆಳೆದು ಜಾರುವ ಸಾಧ್ಯತೆ ಹೆಚ್ಚಾಗಿದೆ.



ಕೆಲವರು ಸೆಲ್ಫಿ ತೆಗೆಯುವ ಹುಮ್ಮಸ್ಸಿನಲ್ಲಿ ತೊರೆಗಳ ತುತ್ತತುದಿಗೆ ಅಂಚಿಗೆ ತೆರಳುತ್ತಿರುವುದು ಕಂಡು ಬಂದಿದ್ದು, ಕೆಲವರು ಸಾಮಾಜಿಕ ಜಾಲತಾಣಗಳಿಗಾಗಿ ಅಪಾಯಕಾರಿ ಸ್ಥಳಗಳಲ್ಲಿ ಸೆಲ್ಫಿ ತೆಗೆಯಲು ಮುಂದಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ಕ್ಷಣಿಕ ನಿರ್ಲಕ್ಷ್ಯವೂ ದುರ್ಘಟನೆಗೆ ಕಾರಣವಾಗುವ ಸಾಧ್ಯತೆ ಇರುವುದರಿಂದ ಪ್ರವಾಸಿಗರು ಎಚ್ಚರಿಕೆಯಿಂದ ವರ್ತಿಸಬೇಕಿದೆ.

**ಹೋಂ ಸ್ಟೇ, ರೆಸಾರ್ಟ್‌ಗಳಿಗೆ ಎಚ್ಚರಿಕೆ**

ಯಾವುದೇ ವ್ಯಕ್ತಿ, ಸಂಘ-ಸಂಸ್ಥೆಗಳು ಅಥವಾ ಪ್ರವಾಸಿಗರು ಈ ನಿಷೇಧಿತ ಪ್ರದೇಶಗಳಿಗೆ ಪ್ರವೇಶಿಸುವುದು ಅಥವಾ ಪ್ರವೇಶಿಸಲು ಅವಕಾಶ ಕಲ್ಪಿಸುವುದು ಶಿಕ್ಷಾರ್ಹ ಅಪರಾಧವಾಗಿದೆ. ನಿಯಮ ಉಲ್ಲಂಘಿಸುವವರ ವಿರುದ್ಧ ಪ್ರಕೃತಿ ವಿಕೋಪ ನಿರ್ವಹಣಾ ಕಾಯ್ದೆ 2005 ಹಾಗು ಭಾರತೀಯ



ನಾಗರಿಕ ಸುರಕ್ಷಾ ಸಂಹಿತೆ ಅಡಿಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದೆಂದು ಎಚ್ಚರಿಕೆ ನೀಡಲಾಗಿದೆ.

ತಾಲ್ಲೂಕಿನ ಎಲ್ಲಾ ಹೋಂ ಸ್ಟೇ ಹಾಗು ರೆಸಾರ್ಟ್ ಮಾಲೀಕರು ಪ್ರವಾಸಿಗರಿಗೆ ಟ್ರೆಕ್ಕಿಂಗ್ ವ್ಯವಸ್ಥೆ ಕಲ್ಪಿಸಬಾರದು. ಒಂದು ವೇಳೆ ಅನಾಹುತ ಸಂಭವಿಸಿದರೆ ಮಾಲೀಕರೇ ನೇರ ಹೊಣೆಗಾರರಾಗುತ್ತಾರೆಂದು ಆದೇಶದಲ್ಲಿ ಎಚ್ಚರಿಕೆ ನೀಡಲಾಗಿದೆ.

# ಹುಂಡಿ ಹಣ ಎಣಿಕೆ ವೇಳೆ ಕಳ್ಳತನಕ್ಕೆ ಯತ್ನ

» ಮೊದಲನೇ ಪುಟದಿಂದ



ಈ ಹಿನ್ನಲೆಯಲ್ಲಿ ಪ್ರಕರಣದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಅಗತ್ಯವಿದ್ದರೆ ಹಿಂದಿನ ವರ್ಷಗಳ ಹುಂಡಿ ಹಣ ಎಣಿಕೆ ಪ್ರಕ್ರಿಯೆಗಳನ್ನೂ ಪರಿಶೀಲಿಸಿ ಲೋಪಗಳು ನಡೆದಿವೆಯೇ ಎಂಬುದನ್ನು ಅಧಿಕಾರಿಗಳು ಖಚಿತಪಡಿಸಬೇಕು. ಜಿಲ್ಲಾಡಳಿತ ಹಾಗೂ ಸಂಬಂಧಿತ ಅಧಿಕಾರಿಗಳು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸಮಗ್ರ ತನಿಖೆಗೆ ಆದೇಶಿಸಿ, ಭಕ್ತರ ನಂಬಿಕೆ ಮತ್ತು ದೇವಸ್ಥಾನದ ಗೌರವವನ್ನು ಕಾಪಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಮುಂದಿನ ದಿನಗಳಲ್ಲಿ ಹುಂಡಿ ಹಣ ಎಣಿಕೆ ವೇಳೆ ಉನ್ನತ ಮಟ್ಟದ ಭದ್ರತೆ, ಸಮರ್ಪಕ ಬೆಳಕಿನ ವ್ಯವಸ್ಥೆ, ಸಿಸಿಟಿವಿ ನಿಗಾ, ನಿರಂತರ ವಿಡಿಯೋ ದಾಖಲೀಕರಣ ಹಾಗು ಪಾರದರ್ಶಕ ಕಾರ್ಯವಿಧಾನಗಳನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕೆಂದು ಭಕ್ತರು ಒತ್ತಾಯಿಸಿದ್ದಾರೆ.

# ಜಾತಿ ನಿಂದನೆ, ಹಲ್ಲೆ : ಸರ್ಕಾರಿ ಶಾಲೆ ಶಿಕ್ಷಕಿ ವಿರುದ್ಧ ಆರೋಪ

» ಮೊದಲನೇ ಪುಟದಿಂದ

ದೂರು ನೀಡಿದರೂ ಪ್ರಯೋಜನವಾಗಿಲ್ಲವೆಂದರು.

ಪೋಷಕರು ಮಾತನಾಡಿ, ವಿದ್ಯಾರ್ಜನೆಗಾಗಿ ಮಕ್ಕಳನ್ನು ಸರ್ಕಾರಿ ಶಾಲೆಗೆ ಕಳುಹಿಸಿದರೆ ಶಿಕ್ಷಕಿ ಮಕ್ಕಳಿಗೆ ಬಾಯಿಗೆ ಬಂದಂತೆ ಬೈಯ್ಯುತ್ತಾ ರೆಂದು ಮನೆಗೆ ಬಂದು ದೂರು ಹೇಳುತ್ತಾರೆ. ಯಾವ ಮಕ್ಕಳಾದರೂ ಶಿಕ್ಷಕಿ ಬೈಯ್ಯುವ ಮಾತುಗಳನ್ನು ಮನಸ್ಸಿಗೆ ತೆಗೆದುಕೊಂಡು ಏನಾದರೂ ಅನಾಹುತ ಮಾಡಿಕೊಂಡರೆ ಅದಕ್ಕೆ ನೇರ ಕಾರಣ ಶಿಕ್ಷಕಿ ಕುಸುಮಾ ಎಂದು ಆರೋಪಿಸಿದರು.

ಈ ಶಿಕ್ಷಕಿಯಿಂದ ಶಾಲೆಯ ವಾತಾವರಣ ಹಾಳಾಗಿದೆ. ನಾಲ್ಕು ವರ್ಷಗಳಿಂದ ಶಿಕ್ಷಕಿ ವಿರುದ್ಧ ದೂರುಗಳು ಕೇಳಿಬರುತ್ತಿವೆ. ಕೂಡಲೇ ಅವರನ್ನು ಶಾಲೆಯಿಂದ ವರ್ಗಾವಣೆ ಮಾಡಬೇಕೆಂದು ಒತ್ತಾಯಿಸಿದರು.

ಈ ಸಂಬಂಧ ಪ್ರತಿಕ್ರಿಯಿಸಿದ ಸಹ ಶಿಕ್ಷಕಿ ಹೆಚ್.ಕೆ.ಕುಸುಮಾ ಅವರು, ಮಕ್ಕಳು ಕೊಟ್ಟಂತಹ ಹೋಮ್‌ವರ್ಕ್ ನ್ನು ಸರಿಯಾಗಿ ಮಾಡುವುದಿಲ್ಲ. ಬೆಳಿಗ್ಗೆ ಹೇಳಿದ ಕೆಲಸ ಸಂಜೆ ಮಾಡು ತ್ತಾರೆ. ಶಿಕ್ಷಕಿಯಾಗಿ ಇದನ್ನು ಪ್ರಶ್ನಿಸುವುದು ನನ್ನ ಕರ್ತವ್ಯ. ಜಾತಿ ನಿಂದನೆ ಹಾಗು ಹಲ್ಲೆ ಮಾಡಿದ್ದೇನೆಂಬ ಆರೋಪಗಳೆಲ್ಲಾ ಸುಳ್ಳು. ಉದ್ದೇಶಪೂರ್ವಕವಾಗಿ ನನ್ನ ವಿರುದ್ಧ ಹಗೆತನ ಸಾಧಿಸುತ್ತಿದ್ದಾರೆಂದು ಹೇಳಿದರು.

# ಖಮೇನಿ ಅಂತ್ಯಕ್ರಿಯೆ ಇಂದು: ಇರಾನ್ ಮೇಲೆ ಪ್ರಬಲ ದಾಳಿ ನಡೆಸಲಿದ್ದೇವೆ ಎಂದ ಟ್ರಂಪ್

• ಪ್ರಜೋದಯ ವರದಿ



**ವಾಷಿಂಗ್ಟನ್:** ಇರಾನ್ ಪರಮೋಚ್ಚ ನಾಯಕರಾಗಿದ್ದ ಆಯತೊಲ್ಲಾ ಅಲಿ ಖಮೇನಿ ಅವರ ಅಂತ್ಯಕ್ರಿಯೆ ವಿಧಿಗಳು ಜುಲೈ 9ರಂದು (ಗುರುವಾರ) ಪೂರ್ಣಗೊಳ್ಳಲಿವೆ. ಇದರ ಬೆನ್ನಲ್ಲೇ, ಇಂದು ರಾತ್ರಿ (ಬುಧವಾರ) ಇರಾನ್ ಮೇಲೆ ಮತ್ತಷ್ಟು ಪ್ರಬಲ ದಾಳಿಗಳನ್ನು ನಡೆಸಲಿದ್ದೇವೆಂದು ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ.

ಟರ್ಕಿಯಲ್ಲಿ ನಡೆಯುತ್ತಿರುವ ನ್ಯಾಟೊ ಶೃಂಗಸಭೆಯಲ್ಲಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ಅವರೊಂದಿಗಿನ ಭೇಟಿಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ್ದಾರೆ. ನಾನು ಸಣ್ಣದೊಂದು ಎಚ್ಚರಿಕೆ ನೀಡುತ್ತಿದ್ದೇನೆ. ನಾವು ಇಂದು ರಾತ್ರಿ ಇರಾನಿಯನ್ನರ ಮೇಲೆ ಪ್ರಬಲ ದಾಳಿ ಮಾಡಲಿದ್ದೇವೆಂದು ಹೇಳಿದ್ದಾರೆ.

ಹೊರ್ಮುಜ್ ಜಲಸಂಧಿಯಲ್ಲಿ ಮೂರು ತೈಲ ಟ್ಯಾಂಕರ್‌ಗಳ ಮೇಲೆ ಕ್ಷಿಪಣಿ ದಾಳಿ ನಡೆದ ನಂತರ ಅಮೇರಿಕಾ ಇರಾನ್‌ಗೆ ತೈಲ ಮಾರಾಟ ಮಾಡಲು ನೀಡಿದ್ದ ಪರವಾನಗಿಯನ್ನು ರದ್ದುಗೊಳಿಸಿದ್ದು, ತನ್ನೆಲ್ಲಾ ವಹಿವಾಟುಗಳನ್ನು ಮುಕ್ತಾಯಗೊಳಿಸಲು ಜುಲೈ 17ರವರೆಗೆ ಗಡುವು ನೀಡಿದೆ.

ಹೊರ್ಮುಜ್ ಜಲಸಂಧಿಯ ಮೂಲಕ ಹಾದುಹೋಗುತ್ತಿದ್ದ ಮೂರು ವಾಣಿಜ್ಯ ಹಡಗುಗಳ ಮೇಲೆ ಇರಾನ್ ನಡೆಸಿದ ದಾಳಿಗೆ ಪ್ರತಿಯಾಗಿ ಅಮೇರಿಕಾವು ಹೊಸ ವೈಮಾನಿಕ ದಾಳಿಗಳನ್ನು ನಡೆಸಿದೆ ಎಂದು ಅಮೇರಿಕಾ ಸೆಂಟ್ರಲ್ ಕಮಾಂಡ್ ತಿಳಿಸಿದೆ. ಇದರ ಬೆನ್ನಲ್ಲೇ, ನಾವು ಬಹರೇನ್ ಮತ್ತು ಕುವೈತ್‌ನಲ್ಲಿರುವ ಅಮೇರಿಕಾದ ಸೇನಾ ನೆಲೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದೇವೆಂದು ಇರಾನ್‌ನ ರೆವಲ್ಯೂಷನರಿ ಗಾರ್ಡ್ಸ್ ಹೇಳಿದೆ.



**ಹಾಸನ: ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ವತಿಯಿಂದ ಬೆಂಗಳೂರಿನ ವಿಜಯ ನಗರದ ಶ್ರೀ ಬಸವೇಶ್ವರ ಸುಜ್ಞಾನ ಮಂಟಪದಲ್ಲಿ ನಡೆದ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ, ನಾಡೋಜ ಗೊ.ರು.ಚನ್ನಬಸಪ್ಪ ಅವರನ್ನು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಘಟಕದಿಂದ ಸನ್ಮಾನಿಸಲಾಯಿತು.**
**ರಾಜ್ಯ ಕದಳಿ ವೇದಿಕೆ ಸಂಚಾಲಕಿ ಸುಶೀಲಾ ಸೋಮಶೇಖರ್, ಅಧ್ಯಕ್ಷೆ ತಿರ್ಥಕುಮಾರಿ ವೆಂಕಟೇಶ್, ಸಂಘಟನಾ ಕಾರ್ಯದರ್ಶಿ ಕುಮಾರ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಪ್ರಧಾನ ಕಾರ್ಯದರ್ಶಿ ಕಟ್ಟಾಯ ಶಿವಕುಮಾರ್ ಮತ್ತಿತರರಿದ್ದರು.**

# ರೈಲಿನಲ್ಲೇ ಹೆರಿಗೆ ಮಾಡಿಸಿದ ವೈದ್ಯಕೀಯ ವಿದ್ಯಾರ್ಥಿನಿಯರು

• ಪ್ರಜೋದಯ ವರದಿ



**ಹಾಸನ:** ಚಲಿಸುತ್ತಿದ್ದ ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಗರ್ಭಿಣಿಗೆ ಹೆರಿಗೆ ನೋವು ಕಾಣಿಸಿ ಕೊಂಡಿದ್ದು, ಅದೇ ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಮೂವರು ವೈದ್ಯಕೀಯ ವಿದ್ಯಾರ್ಥಿನಿಯರು ನೋವಿನಿಂದ ಬಳಲುತ್ತಿದ್ದ ಗರ್ಭಿಣಿ ಮಹಿಳೆಗೆ ಹೆರಿಗೆ ಮಾಡಿಸಿ ಸಮಯಪ್ರಜ್ಞೆ ಮೆರೆದಿದ್ದಾರೆ.

ನಗರದ ತಣ್ಣೀರುಹಳ್ಳದಲ್ಲಿರುವ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಕಾಲೇಜು ಮತ್ತು ಆಸ್ಪತ್ರೆಯ ಮಾನಸರೋಗ ವಿಭಾಗದ ಸ್ನಾತಕೋತ್ತರ ವಿದ್ಯಾರ್ಥಿನಿಯರಾದ ಡಾ.ರಶ್ಮಿ ಬಿಳಗಿ, ಡಾ.ಲತಾಶ್ರೀ ಹಾಗೂ ಡಾ.ಎಂ.ಶಾಹಿನ್ ಅವರು ರಾಷ್ಟ್ರೀಯ ಸಮ್ಮೇಳನ ವೊಂದರಲ್ಲಿ ಭಾಗವಹಿಸಲು ಹಾಸನದಿಂದ ವಾರಣಾಸಿಗೆ ರೈಲಿನಲ್ಲಿ ಪ್ರಯಾಣಿಸುತ್ತಿದ್ದರು.

ಈ ರೈಲಿನಲ್ಲಿ ಗರ್ಭಿಣಿ ಮಹಿಳೆ ಪ್ರಯಾಣಿಸುತ್ತಿದ್ದು, ಈ ವೇಳೆ ರೈಲಿನಲ್ಲೇ ಗರ್ಭಿಣಿಗೆ ಹೆರಿಗೆ ನೋವು ಕಾಣಿಸಿಕೊಂಡಿದೆ. ಆಸ್ಪತ್ರೆಗೆ ಹೋಗಲು ಸಮಯಾವಕಾಶ ಕಡಿಮೆಯಿದ್ದು ಮಹಿಳೆ ಹಾಗು ಮಗುವಿನ ಜೀವಕ್ಕೆ ತೊಂದರೆ ಆಗುವ ಆತಂಕ ಎದುರಾಗಿದ್ದು, ಕೂಡಲೇ ಗರ್ಭಿಣಿ ಮಹಿಳೆ ಬಳಿ ಬಂದು ಮೂವರು ಆಯುರ್ವೇದ ವೈದ್ಯರು ಆರೋಗ್ಯ ತಪಾಸಣೆ ನಡೆಸಿದ್ದು, ಮಗುವಿನ ಕುತ್ತಿಗೆಗೆ ಬಳ್ಳಿ ಸುತ್ತಿಕೊಂಡಿರುವುದು ಗೊತ್ತಾಗಿದೆ. ಕೂಡಲೇ ಬಳ್ಳಿಯನ್ನು ಬಿಡಿಸಿ ಮಗುವನ್ನು ಸುರಕ್ಷಿತವಾಗಿ ಹೊರತೆಗೆಯುವ ಮೂಲಕ ರೈಲಿನಲ್ಲೇ ಯಶಸ್ವಿಯಾಗಿ ಹೆರಿಗೆ ಮಾಡಿಸಿ ಮಾನವೀಯತೆ ಹಾಗು ಸಮಯಪ್ರಜ್ಞೆ ಮೆರೆದಿದ್ದಾರೆ. ತಾಯಿ ಮತ್ತು ಮಗವಿನ ಆರೋಗ್ಯ ಉತ್ತಮವಾಗಿದ್ದು ಮೂವರು ಮಹಿಳಾ ವೈದ್ಯರ ಕಾರ್ಯಕ್ಕೆ ಸಾರ್ವಜನಿಕ ವಲಯ ದಲ್ಲಿ ಅಪಾರ ಮೆಚ್ಚುಗೆ ವ್ಯಕ್ತವಾಗಿದೆ.

# ಮಹಾರಾಷ್ಟ್ರದಲ್ಲಿ ಮುಂಗಾರು ಅಬ್ಬರ: 62 ಮಂದಿ ಸಾವು

• ಪ್ರಜೋದಯ ವರದಿ



**ಮುಂಬೈ:** ಮಹಾರಾಷ್ಟ್ರದಲ್ಲಿ ಮಳೆ ಸಂಬಂಧಿತ ಅವಘಡಗಳಲ್ಲಿ ಈವರೆಗೆ (ಜೂನ್ 1ರಿಂದ ಜುಲೈ 8ರವರೆಗೆ) ಒಟ್ಟು 62 ಜನ ಸಾವಿಗೀಡಾಗಿದ್ದಾರೆ. 74 ಮಂದಿ ಗಾಯಗೊಂಡಿದ್ದಾರೆ. ಇದೇ ಅವಧಿಯಲ್ಲಿ ಸುಮಾರು 200ಕ್ಕೂ ಹೆಚ್ಚು ಜಾನುವಾರುಗಳು ಮೃತಪಟ್ಟಿವೆ ಎಂದು ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ (ಎಸ್‌ಡಿಎಂಎ) ಬುಧವಾರ ತಿಳಿಸಿದೆ.

ಇಂದು (ಬುಧವಾರ) ಮುಂಬೈ-ಪುಣೆ-ನಾಸಿಕ್ ಪಟ್ಟಣಗಳಲ್ಲಿ ನಿರಂತರ ಮಳೆ ಸುರಿ ಯುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.

ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ವರದಿಯ ಪ್ರಕಾರ, ಕಟ್ಟಡ/ಗೋಡೆ ಕುಸಿತ ಪ್ರಕರಣಗಳಲ್ಲಿ 25 ಮಂದಿ, ಸಿಡಿಲು ಬಡಿದು 23, ಮರಗಳು ಉರುಳಿ ಬಿದ್ದು 6, ಭೂಕುಸಿತ ಮತ್ತು ಮಣ್ಣು ಕುಸಿತದಲ್ಲಿ 6 ಹಾಗೂ ಪ್ರವಾಹದಿಂದ ಇಬ್ಬರು ಸಾವಿಗೀಡಾಗಿದ್ದಾರೆ.

**ರೈಲು ಸೇವೆ, ವಿದ್ಯುತ್ ವ್ಯತ್ಯಯ**

ಪಾಲ್ಘರ್ ಜಿಲ್ಲೆಯ ವಸಾಯಿ-ವಿರಾರ್ ವ್ಯಾಪ್ತಿಯಲ್ಲಿ ಪ್ರವಾಹದ ನೀರು ಸ್ವಲ್ಪ ಮಟ್ಟಿಗೆ ಇಳಿಮುಖವಾಗಿದೆ ಯಾದರೂ ಜನರ ಸಂಕಷ್ಟ ಇನ್ನೂ ಮುಗಿದಿಲ್ಲ. ನಲಸೋಪಾರ ಪ್ರದೇಶದಲ್ಲಿ ರೈಲು ಹಳಿಗಳು ಸಂಪೂರ್ಣ ಜಲಾವೃತಗೊಂಡಿರುವುದರಿಂದ ಪಶ್ಚಿಮ ರೈಲ್ವೆಯ ಉಪನಗರ ರೈಲು ಸಂಚಾರದಲ್ಲಿ ಭಾರಿ ಅಡಚಣೆ ಉಂಟಾಗಿದೆ.

ವಿದ್ಯುತ್ ಸಂಪರ್ಕ ಮರುಸ್ಥಾಪಿಸಲು ಸಿಬ್ಬಂದಿ ಶ್ರಮಿಸುತ್ತಿದ್ದಾರೆ. ಆದಾಗ್ಯೂ, ಹಲವಾರು ಬಾರಿ ವಿದ್ಯುತ್ ಕಡಿತಗೊಂಡಿದೆ ಎಂದು ವಸಾಯಿ, ನಲಸೋಪಾರ ಮತ್ತು ವಿರಾರ್ ನಿವಾಸಿಗಳು ತಿಳಿಸಿದ್ದಾರೆ.

ಇಲ್ಲಿನ ಖಡಕ್ವಾಸ್ಲಾ ಅಣೆಕಟ್ಟೆಯಿಂದ ಮುಥಾ ನದಿಗೆ 27,203 ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ. ಇತ್ತ ಆಂದ್ರಾ ಅಣೆಕಟ್ಟೆ ಶೇ.75ರಷ್ಟು ಭರ್ತಿಯಾಗಿದ್ದು, ಯಾವುದೇ ಕ್ಷಣದಲ್ಲಿ ಗೇಟ್‌ಗಳನ್ನು ತೆರೆಯದೆ ಅಣೆಕಟ್ಟಿನ ಸ್ಪಿಲ್‌ವೇಗಳ ಮೂಲಕ ನೇರವಾಗಿ ನೀರನ್ನು ಬಿಡುಗಡೆ ಮಾಡುವ ಸಾಧ್ಯತೆಯಿದೆ. ಹಾಗಾಗಿ ಇಂದ್ರಮಣಿ ಮತ್ತು ಸುಧಾ ನದಿ ತೀರದ ಜನ ಜಾಗರೂಕರಾಗಿರಬೇಕೆಂದು ಜಿಲ್ಲಾಡಳಿತ ಮನವಿ ಮಾಡಿದೆ.

ನಾಸಿಕ್-ತ್ರಯಂಬಕೇಶ್ವರದಲ್ಲಿ ವರುಣಾರ್ಭಟ ಜೋರಾಗಿದ್ದು, ನಂದೂರ್ ಮಾಧಮೇಶ್ವರ ಬ್ಯಾರೇಜ್‌ನಿಂದ ಗೋದಾವರಿ ನದಿಗೆ 12,620 ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗಿದೆ. ಭಾರಿ ಮಳೆಯಿಂದಾಗಿ ಹಲವು ಪ್ರದೇಶಗಳಲ್ಲಿ ರಸ್ತೆಗಳು ಜಲಾವೃತಗೊಂಡಿರುವುದರಿಂದ ನಾಸಿಕ್-ತ್ರಯಂಬಕೇಶ್ವರ ರಸ್ತೆಯನ್ನು ಸಂಪೂರ್ಣವಾಗಿಬಂದ್ ಮಾಡಲಾಗಿದೆ.

**ಕೇಂದ್ರದಿಂದ ನೆರವು**

ಏತನ್ಮಧ್ಯೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡಣವೀಸ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ ರಾಜ್ಯದ ವಿವಿಧ ಭಾಗಗಳಲ್ಲಿ ಭಾರಿ ಮಳೆಯಿಂದ ಉಂಟಾಗಿರುವ ಹಾನಿಯ ಬಗ್ಗೆ ಮಾಹಿತಿ ಪಡೆದಿದ್ದಾರೆ.

ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಪರಿಹಾರ, ರಕ್ಷಣಾ ಕಾರ್ಯಾಚರಣೆ ಮತ್ತು ನಾಗರಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ತೆಗೆದುಕೊಳ್ಳುತ್ತಿರುವ ಕ್ರಮಗಳ ಕುರಿತು ವಿವರವಾದ ಚರ್ಚೆಗಳು ನಡೆದವು. ಕೇಂದ್ರ ಸರ್ಕಾರದಿಂದ ಅಗತ್ಯವಿರುವ ಎಲ್ಲಾ ತಾಂತ್ರಿಕ ನೆರವು ನೀಡುವುದಾಗಿ ಶಾ ಭರವಸೆ ನೀಡಿದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಸಾಂಸ್ಕೃತಿಕ ಪರಂಪರೆ ನಮ್ಮನ್ನು ಬೆಸೆಯುತ್ತದೆ

**ಜಕರ್ತಾ:** ಸಾಂಸ್ಕೃತಿಕ ಪರಂಪರೆಯು ವಿವಿಧ ದೇಶದ ಜನರನ್ನು ಒಂದಾಗಿ ಸುತ್ತದೆಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದಾರೆ.

ಯೋಗ್ಯಕರ್ತಾದಲ್ಲಿರುವ ಐತಿಹಾಸಿಕ ಪ್ರಂಬನನ್ ದೇವಾಲಯ ಸಂಕೀರ್ಣವನ್ನು ಸಂರಕ್ಷಿಸಿಟ್ಟುಕೊಂಡಿರುವುದಕ್ಕಾಗಿ ಇಂಡೋನೇಷ್ಯಾ ಜನತೆಗೆ ಮೋದಿ ಧನ್ಯವಾದ ಅರ್ಪಿಸಿದ್ದಾರೆ.

ಯುನೆಸ್ಕೋ ವಿಶ್ವ ಪರಂಪರೆಯ ತಾಣವಾಗಿರುವ ಪ್ರಂಬನನ್ ದೇವಾಲಯದ ಸಂರಕ್ಷಣೆ ಮತ್ತು ಪುನಃಸ್ಥಾಪನೆ ಯೋಜನೆಗೆ ಪ್ರಧಾನಿ ಮೋದಿ ಹಾಗೂ ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಜಂಟಿಯಾಗಿ ಚಾಲನೆ ನೀಡಿದರು.

ಈ ಯೋಜನೆಯಲ್ಲಿ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ಪ್ರಮುಖ ಪಾತ್ರ ವಹಿಸಲಿದೆ. 10ನೇ ಶತಮಾನದಲ್ಲಿನಿರ್ಮಾಣಗೊಂಡಿರುವ ಪ್ರಂಬನನ್ ದೇವಾಲಯವು ಇಂಡೋನೇಷ್ಯಾದ ಅತ್ಯಂತ ದೊಡ್ಡ ಹಿಂದೂ ದೇವಾಲಯವಾಗಿದ್ದು, ಶಿವನಿಗೆ ಸಮರ್ಪಿತವಾಗಿದೆ. ಇಲ್ಲಿ ಶಿವ, ವಿಷ್ಣು, ಬ್ರಹ್ಮ ಮತ್ತುಗಣೇಶ, ದುರ್ಗೆಯ ವಿಗ್ರಹಗಳಿದ್ದು, ರಾಮಾಯಣದ ಮಹಾಕಾವ್ಯವನ್ನು ಬಿಂಬಿಸುವ ಕೆತ್ತನೆಗಳಿವೆ. ದೇವಾಲಯದಲ್ಲಿ ಮಹಾ ಮೃತ್ಯುಂಜಯ ಮತ್ತು ಓಂ ನಮಃ ಶಿವಾಯಜಪಗಳನ್ನು ಕೇಳಿ ನನ್ನ ಹೃದಯಸ್ಪರ್ಶಿಸಿತು ಎಂದು ಹೇಳಿದ್ದಾರೆ.

# ಪಠ್ಯೇತರ ಚಟುವಟಿಕೆ-ವಿವಿಧ ಕ್ಲಬ್ ಉದ್ಘಾಟನೆ



• ಪ್ರಜೋದಯ ವರದಿ

**ಹಾಸನ:** ನಗರದ ಸಂತ ಫಿಲೋಮಿನಾ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಪಠ್ಯೇತರ ಚಟುವಟಿಕೆಯ ವಿವಿಧ ಘಟಕಗಳ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಸೇವಾದಳ ಸ್ಕೌಟ್ಸ್ ಅಂಡ್ ಗೈಡ್ಸ್, ಕಲ್ಚರಲ್ ಕ್ಲಬ್, ಸೈನ್ಸ್ ಕ್ಲಬ್, ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಇಕೋ ಕ್ಲಬ್ ಸೇರಿ ಸುಮಾರು 10 ಕ್ಲಬ್‌ಗಳು ಈ ವರ್ಷದ ಕಾರ್ಯ ಚಟುವಟಿಕೆ ಆರಂಭಿಸಿದವು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ. ವೀಣಾ ಲಿಡಿಯಾ ಲೋಬೋ ಅವರು ಮಾತನಾಡಿ, ವಿದ್ಯಾರ್ಥಿಗಳ ಜೀವನದಲ್ಲಿ ಇಂತಹ ಕ್ಲಬ್‌ಗಳು ಬಹು ಮುಖ್ಯ. ಓದಿನ ಜೊತೆಗೆ ನಾಯಕತ್ವದ ಗುಣಗಳು ಬೆಳೆಯಲು ಮತ್ತು ವ್ಯಕ್ತಿತ್ವ ವಿಕಸನಕ್ಕೆ ಇಂತಹ ಘಟಕಗಳು ಪೂರಕವಾಗುತ್ತವೆ. ಮಕ್ಕಳ ಮಾನಸಿಕ ಮತ್ತು ದೈಹಿಕ ಬೆಳವಣಿಗೆಗೆ ಪೂರಕವಾಗುತ್ತವೆಂದು ತಿಳಿಸಿದರು. ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಅಧಿಕಾರಿ ಡಾ.ಐಚನಹಳ್ಳಿ ಕೃಷ್ಣಪ್ಪ ಮತ್ತು ವಿವಿಧ ಘಟಕಗಳ ಮುಖ್ಯಸ್ಥರು ಹಾಗು ಉಪನ್ಯಾಸಕರು ಹಾಜರಿದ್ದರು.

# 14 ಗ್ರಾಂ ತೂಕದ ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಅರಸೀಕೆರೆ:** ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಬಾಗಿಲ ಬೀಗ ಮುರಿದು ಒಳನುಗ್ಗಿರುವ ಕಳ್ಳರು 14 ಗ್ರಾಂ ತೂಕದ ಚಿನ್ನಾಭರಣ ಕಳವು ಮಾಡಿರುವ ಘಟನೆ ತಾಲ್ಲೂಕಿನ ರಾಮಕೃಷ್ಣಾಪುರ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಕೃಷ್ಣಪ್ಪ ಅವರು ಮದುವೆ ನಿಮಿತ್ತ ಕುಟುಂಬ ಸಮೇತ ಜು.4 ರಂದು ಮನೆಗೆ ಬೀಗ ಹಾಕಿಕೊಂಡು ಬೆಂಗಳೂರಿಗೆ ತೆರಳಿದ್ದರು.

ಜು.6ರಂದು ವಾಪಾಸ್ ಬಂದಾಗ ಬಾಗಿಲು ಮುರಿದಿರುವುದು ತಿಳಿದಿದೆ. ಮನೆಯ ಬಾಗಿಲಿಗೆ ಹಾಕಿದ್ದ ಬೀಗ ಹಾಗು ಬೀರುವಿನ ಬಾಗಿಲನ್ನು ಯಾವುದೋ ಆಯುಧದಿಂದ ಒಡೆದು ಚಿನ್ನಾಭರಣ ಕದ್ದಿದ್ದಾರೆ. ಜಾವಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜು.10 ರಿಂದ 14ರ ವರೆಗೆ ಪೌರಾಣಿಕ ನಾಟಕೋತ್ಸವ

• ಪ್ರಜೋದಯ ವರದಿ

**ಹಾಸನ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗು ಜಿಲ್ಲೆಯ ವಿವಿಧ ಸಾಂಸ್ಕೃತಿಕ ಮತ್ತು ಕಲಾ ಸಂಘಗಳ ಸಹಯೋಗದಲ್ಲಿ ಜು.10 ರಿಂದ 14ರ ವರೆಗೆ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಐದು ದಿನಗಳ ಪೌರಾಣಿಕ ನಾಟಕೋತ್ಸವ ಆಯೋಜಿಸಲಾಗಿದೆ ಎಂದು ಶ್ರೀ ಲಕ್ಷ್ಮೀರಂಗನಾಥ ಸಾಂಸ್ಕೃತಿಕ ಕಲಾ ಸಂಘದ ಅಧ್ಯಕ್ಷ ಎಸ್.ಎಲ್.ಚಂದ್ರಶೇಖರ್ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ಪ್ರತಿದಿನ ಬೆಳಿಗ್ಗೆ 10.30ಕ್ಕೆ ನಾಟಕೋತ್ಸವ ಆರಂಭವಾಗಲಿದೆ. ಉಚಿತ ಪ್ರವೇಶ ಕಲ್ಪಿಸಲಾಗಿದೆ. ಆಧುನಿಕ ಮನರಂಜನಾ ಮಾಧ್ಯಮಗಳ ಪ್ರಭಾವ ಹೆಚ್ಚುತ್ತಿರುವ ಸಂದರ್ಭದಲ್ಲಿ ಪೌರಾಣಿಕ ನಾಟಕಗಳ ಮೂಲಕ ಯುವ ಸಮುದಾಯಕ್ಕೆ ಭಾರತೀಯ ಸಂಸ್ಕೃತಿ, ಧಾರ್ಮಿಕ ಮೌಲ್ಯಗಳು ಹಾಗೂ




ರಂಗಕಲೆಯ ವೈಭವವನ್ನು ಪರಿಚಯಿಸುವ ಉದ್ದೇಶದಿಂದ ನಾಟಕೋತ್ಸವ ಏರ್ಪಡಿಸಲಾಗಿದೆ ಎಂದರು.

ಜು.10 ರಂದು ಶ್ರೀ ಚಾಮುಂಡೇಶ್ವರಿ ಕ್ಷೇಮಾಭಿವೃದ್ಧಿ ಕಲಾ ಸಂಘದಿಂದ ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ, ಜು.11 ರಂದು ಶ್ರೀ ಅನ್ನಪೂರ್ಣೇಶ್ವರಿ ಕಲಾ ಸಂಘದಿಂದ ಕುರುಕ್ಷೇತ್ರ, ಜು.12ರಂದು ಶ್ರೀ ಮಾರುತಿ ರಂಗಭೂಮಿ ಮತ್ತು ಸಾಂಸ್ಕೃತಿಕ ಕಲಾ ಸಂಘದಿಂದ ಸಂಪೂರ್ಣ ರಾಮಾಯಣ, ಜು.13 ರಂದು ಶ್ರೀದೇವಿ ಆದಿಶಕ್ತಿ ಕಲಾವಿದರ ಟ್ರಸ್ಟ್ ಗೌರಿ ಕೊಪ್ಪಲು ವತಿಯಿಂದ ಮುದ್ರಿಕಾ ಪ್ರಧಾನ ಅಥವಾ ಸಂಪೂರ್ಣ ರಾಮಾಯಣ ಹಾಗು ನಾಟ ಕೋತ್ಸವದ ಸಮಾರೋಪ ದಿನವಾದ 14 ರಂದು ಸಿಂಗಮ್ಮದೇವಿ ಮತ್ತು ಹೊಳೆನರಸೀಪುರದ ಶ್ರೀ ಶನೇಶ್ವರಸ್ವಾಮಿ ಕಲಾ ಸಂಘದಿಂದ ರಾಜಸತ್ಯವೃತ ನಾಟಕ ಪ್ರದರ್ಶನಗೊಳ್ಳಲಿದೆ ಎಂದು ಹೇಳಿದರು.

ಹಿರಿಯ ವಕೀಲ ಮಳಲಿ ಜಯರಾಮ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಾಸಕ ಹೆಚ್.ಪಿ. ಸ್ವರೂಪ್ ಅಧ್ಯಕ್ಷತೆ ವಹಿಸಲಿದ್ದಾರೆಂದರು.ಕಲಾವಿದರಾದಗೋವಿಂದೇಗೌಡ, ವೈಭವ್ ವೆಂಕಟೇಶ್, ಅಣ್ಣಪ್ಪ, ಮಹಾದೇವ್, ಸ್ವಾಮಿ, ನಿರಂಜನ್, ಗುರುಪ್ರಸಾದ್, ಚಂದ್ರಶೇಖರ್ ಇದ್ದರು.

# ಮದ್ಯ ಸೇವಿಸಿ ಕಾರು ಚಾಲನೆ: ಇಬ್ಬರಿಗೆ ಗಾಯ

**ಹಾಸನ:** ಕಂಠಪೂರ್ತಿ ಮದ್ಯ ಸೇವನೆ ಮಾಡಿ ಕಾರು ಚಾಲನೆ ಮಾಡುತ್ತಿದ್ದ ವೇಳೆ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿದ್ದ ಇಬ್ಬರು ಗಂಭೀರವಾಗಿ ಗಾಯ ಗೊಂಡು, ಒಬ್ಬ ಪವಾಡ ಸದೃಶ ರೀತಿಯಲ್ಲಿ ಪಾರಾದ ಘಟನೆ ತಾಲ್ಲೂಕಿನ ಮುದ್ದೇನಹಳ್ಳಿ ಗ್ರಾಮದ ಬಳಿ ಮಂಗಳವಾರ ತಡರಾತ್ರಿ ನಡೆದಿದೆ. ಶ್ರೀನಿವಾಸ್ (21) ಗಂಭೀರವಾಗಿ ಗಾಯಗೊಂಡ ಯುವಕ.

ಪುರದಮ್ಮ ದೇವಾಲಯದ ಕಡೆಯಿಂದ ಬರುತ್ತಿದ್ದ ಕಾರು ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಡಿಕ್ಕಿ ಹೊಡೆದ ಪರಿಣಾಮ ಕಾರು ನಜ್ಜುಗುಜ್ಜಾಗಿದೆ. ಕಾರಿನಲ್ಲಿ ಸಿಲುಕಿದ್ದ ಇಬ್ಬರನ್ನು ಹೊರತೆಗೆದ ಸ್ಥಳೀಯರು, ನಂತರ ಆ್ಯಂಬುಲೆನ್ಸ್‌ನಲ್ಲಿ ಗಾಯಾಳುಗಳನ್ನು ಆಸ್ಪತ್ರೆಗೆ ರವಾನಿಸಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅರಕಲಗೂಡಿನಲ್ಲಿ ದಿನವಿಡೀ ಮಳೆ: ಜನಜೀವನ ಅಸ್ತವ್ಯಸ್ತ

• ಪ್ರಜೋದಯ ವರದಿ



**ಅರಕಲಗೂಡು:** ತಾಲ್ಲೂಕಿನಾದ್ಯಂತ ಬುಧವಾರ ಬೆಳಿಗ್ಗೆಯಿಂದ ನಿರಂತರವಾಗಿ ಸುರಿದ ಮಳೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿತು. ದಿನವಿಡೀ ಜಿಟಿಜಿಟಿಯಾಗಿ ಸುರಿದ ಮಳೆಯಿಂದ ರಸ್ತೆಗಳಲ್ಲಿ ನೀರು ನಿಂತು ವಾಹನ ಸಂಚಾರಕ್ಕೆ ಅಡಚಣೆ ಉಂಟಾಯಿತು.

ಶಾಲಾ-ಕಾಲೇಜುಗಳಿಗೆ ತೆರಳುತ್ತಿದ್ದ ವಿದ್ಯಾರ್ಥಿಗಳು ಹಾಗು ವಿವಿಧ ಕೆಲಸಗಳ ನಿಮಿತ್ತ ತಾಲ್ಲೂಕು ಕೇಂದ್ರ ಮತ್ತು ಹಾಸನ ನಗರಕ್ಕೆ ಪ್ರಯಾಣಿಸುತ್ತಿದ್ದ ಸಾರ್ವಜನಿಕರು ಮಳೆಯಿಂದ ಪರದಾಡಿದರು. ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರು ಮಳೆಯಿಂದ ರಕ್ಷಿಸಿಕೊಳ್ಳಲು ಆಶ್ರಯ ಪಡೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು. ಛತ್ರಿ ಮತ್ತು ಮಳೆಕೋಟು ಬಳಸಿದ್ದರೂ ಹಲವರು ನೆನೆಯುತ್ತಲೇ ಸಂಚರಿಸಬೇಕಾಯಿತು.

ನಿರಂತರ ಮಳೆಯಿಂದ ಪ್ರಮುಖ ರಸ್ತೆಗಳಲ್ಲಿ ನೀರು ಹರಿದ ಪರಿಣಾಮ ವಾಹನ ಸಂಚಾರ ನಿಧಾನಗೊಂಡಿತು. ದ್ವಿಚಕ್ರ ವಾಹನ ಸವಾರರು ಎಚ್ಚರಿಕೆಯಿಂದ ಸಂಚರಿಸಿದರು. ಬೆಳಿಗ್ಗೆ ಯಿಂದಲ್ಲೇ ಮಳೆ ಆರಂಭವಾದ ಕಾರಣ ಕೆಲಸಕ್ಕೆ ತೆರಳುತ್ತಿದ್ದ ನೌಕರರು ಹಾಗು ವ್ಯಾಪಾರಸ್ಥರೂ ತೊಂದರೆ ಅನುಭವಿಸಿದರು.

ಮಳೆಯೊಂದಿಗೆ ಚಳಿ ಹೆಚ್ಚಾಗಿರುವ ಹಿನ್ನಲೆ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸು ವಂತೆ ಸ್ಥಳೀಯರು ಸಲಹೆ ನೀಡಿದ್ದಾರೆ. ಇದೇ ರೀತಿ ಮಳೆ ಮುಂದುವರಿದರೆ ತಗ್ಗು ಪ್ರದೇಶ ಗಳಲ್ಲಿ ನೀರು ನಿಲ್ಲುವ ಸಾಧ್ಯತೆ ಇರುವುದರಿಂದ ಸಂಬಂಧಪಟ್ಟ ಇಲಾಖೆಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ಬ್ರಿಲಿಯಂಟ್ ಪಬ್ಲಿಕ್ ಶಾಲೆಯಲ್ಲಿ ಸಂಸತ್ ಚುನಾವಣೆ



• ಪ್ರಜೋದಯ ವರದಿ

**ಹಾಸನ:** ನಗರದ ಬ್ರಿಲಿಯಂಟ್ ಪಬ್ಲಿಕ್ ಶಾಲೆಯಲ್ಲಿ 2026-27ನೇ ಸಾಲಿನ ಶಾಲಾ ಸಂಸತ್ ಚುನಾವಣೆ ಹಾಗು ಚುನಾಯಿತ ಪ್ರತಿನಿಧಿಗಳ ಪದಗ್ರಹಣ ಸಮಾರಂಭ ಮಂಗಳವಾರ ನೆರವೇರಿತು.

ಶಾಲಾ ಅಧ್ಯಕ್ಷ ರಾಗಿ 10ನೇ ತರಗತಿಯ ಡಿ.ವೈ.ಧ್ರುವ ಹಾಗು ಕಾರ್ಯದರ್ಶಿಯಾಗಿ 9ನೇ ತರಗತಿಯ ಚೆಲ್ಲೂರು ತುಳಸಿ ಆಯ್ಕೆಯಾದರು.

ಶಿಕ್ಷಣ ಮಂತ್ರಿಯಾಗಿ 9ನೇ ತರಗತಿಯ ಡಿ.ಗೌರವ, ಸಂಸ್ಕೃತಿ ಸಚಿವೆಯಾಗಿ 9ನೇ ತರಗತಿಯ ಆರ್.ಶುಭ, ಕ್ರೀಡಾ ಮಂತ್ರಿಯಾಗಿ 10ನೇ ತರಗತಿಯ ಹೆಚ್.ಪಿ.ನಂದೀಶ್, ಸ್ವಚ್ಛತಾ ಸಚಿವೆ ಯಾಗಿ 10ನೇ ತರಗತಿಯ ಎಸ್.ಪಿ.ಸ್ಫೂರ್ತಿ, ರಾಜ್ ಪರಮಾರ್, ಭಾಷಾ ಸಚಿವೆಯಾಗಿ ಆರಾಧ್ಯ ಪಾಟೀಲ್, ಆರೋಗ್ಯ ಮಂತ್ರಿಯಾಗಿ 9ನೇ ತರಗತಿಯ ಬಿ.ಹೆಚ್. ದುಶ್ಯಂತ್, ಹರ್ಮೈನ್, ಮೌಲ್ಯಶ್ರೀ ಸೇರಿ 12 ವಿದ್ಯಾರ್ಥಿಗಳು ಪ್ರಮಾಣ ವಚನ ಸ್ವೀಕರಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಆಡಳಿತಾಧಿಕಾರಿ ನಯನ ಅನಿಲ್ ಕುಮಾರ್ ಅವರು ಮಾತನಾಡಿ, ಶಾಲಾ ಸಂಸತ್ತು ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಜವಾಬ್ದಾರಿ ಮತ್ತು ಶಿಸ್ತು ಬೆಳೆಸುತ್ತದೆ. ನೂತನ ನಾಯಕರು ಶಾಲೆಯ ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡಬೇಕೆಂದು ಸಲಹೆ ನೀಡಿದರು.

ಪ್ರಾಂಶುಪಾಲರಾದ ಕೆ.ಪ್ರಕೃತಿ ಅವರು ಮಾತನಾಡಿ, ನೂತನ ನಾಯಕರಿಗೆ ತಮ್ಮ ಕರ್ತವ್ಯ ಗಳನ್ನು ತಿಳಿಸಿದರು. ಮುಖ್ಯಶಿಕ್ಷಕಿ ರಾಜೇಶ್ವರಿ ಅವರು ಪ್ರತಿಜ್ಞಾ ವಿಧಿ ಬೋಧಿಸಿ ಬ್ಯಾಡ್ಜ್ ಧರಿಸಿ ಸನ್ಮಾನಿಸಿದರು. ಚುನಾವಣಾ ಪ್ರಕ್ರಿಯೆಯಲ್ಲಿ 4 ರಿಂದ 10ನೇ ತರಗತಿ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರ ಅಮಾನತಿಗೆ ಆಗ್ರಹ

• ಪ್ರಜೋದಯ ವರದಿ

**ಹಾಸನ:** ಉಪ ಪ್ರಧಾನಿ ಡಾ.ಬಾಬು ಜಗಜೀವನ್ ರಾಂ ಪುಣ್ಯ ಸ್ಮರಣೆ ಕಾರ್ಯಕ್ರಮಕ್ಕೆ ಸಮಾಜದ ಮುಖಂಡರನ್ನು ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘಿಸಿರುವ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ದೂದ ಪೀರ್ ಅವರನ್ನು ಕೂಡಲೇ ಸೇವೆಯಿಂದ ಅಮಾನುತಗೊಳಿಸ ಬೇಕೆಂದು ಮಾದಿಗ ದಂಡೋರ ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ಆರ್.ವಿಜಯ್‌ಕುಮಾರ್ ಅವರು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ಜು.6ರಂದು ಅಂಬೇಡ್ಕರ್ ಭವನದಲ್ಲಿ ಪುಣ್ಯ ಸ್ಮರಣೆ ಆಯೋಜಿಸಲಾಗಿತ್ತಾದರೂ ವಾಟ್ಸಾಪ್‌ನಲ್ಲಿ ಕಾರ್ಯಕ್ರಮದ ಸಂದೇಶ ಕಳುಹಿಸಿ ಸುಮ್ಮನಾಗಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯಿಂದ ಇದೇ ಮೊದಲ ಬಾರಿಗೆ ನಡೆದ ಕಾರ್ಯಕ್ರಮ ಇದಾಗಿದೆ. ಈ ಹಿಂದಿನ ಜಿಲ್ಲಾಧಿಕಾರಿ ಸತ್ಯಭಾಮಾ ಅವರು ಅರ್ಥಪೂರ್ಣ ಸಮಾರಂಭ ಮಾಡಿದ್ದರು. ಮಾದಿಗ ಸಮುದಾಯವನ್ನು ನಿರ್ಲಕ್ಷಿಸಬೇಕೆಂಬ ಕಾರಣದಿಂದಲೇ ದೂದಪೀರ್ ಹೀಗೆ ಮಾಡಿದ್ದಾರೆಂದು ಆರೋಪಿಸಿದರು.

ರಾಷ್ಟ್ರನಾಯಕರ ಕಾರ್ಯಕ್ರಮ ಆಯೋಜಿಸುವಾಗ ಅವರ ಜೀವನ, ಸಾಧನೆ ಮತ್ತು ವಿಚಾರಧಾರೆಗಳ ಕುರಿತು ಉಪನ್ಯಾಸ ಅಥವಾ ಚರ್ಚೆ ನಡೆಸುವುದು ಅಗತ್ಯ. ಕೇವಲ ಪುಷ್ಪನಮನ ಸಲ್ಲಿಸಿ ಎರಡೇ ನಿಮಿಷಗಳಲ್ಲಿ ಕಾರ್ಯಕ್ರಮ ಮುಗಿಸಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು.




ಈ ಬಗ್ಗೆ ಕೇಳಿದ್ದಕ್ಕೆ ಸಮುದಾಯದ ಯುವ ಮುಖಂಡ ಹಾಗು ಪತ್ರಕರ್ತ ಗಿರೀಶ್ ದೇಶಾಣಿ ಅವರನ್ನು ಅಧಿಕಾರಿ ಏಕವಚನದಲ್ಲಿ ನಿಂದಿಸಿ, ಬೆದರಿಕೆ ಹಾಕಿದ್ದಾರೆ. ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ ಅವರು ಮಧ್ಯಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಲು ಪ್ರಯತ್ನಿಸಿರುವ ವಿಡಿಯೋ ನಮ್ಮ ಬಳಿ ಇದೆ. ಜವಾಬ್ದಾರಿ ಹುದ್ದೆಯಲ್ಲಿರುವ ಅಧಿಕಾರಿಯೇ ಸಾರ್ವಜನಿಕರೊಂದಿಗೆ ಅಸಭ್ಯವಾಗಿ ವರ್ತಿಸಿರುವುದು ಇಲಾಖೆಯ ಗೌರವಕ್ಕೆ ಧಕ್ಕೆ ತಂದಿದೆ ಎಂದು ದೂರಿದರು.

ಇದೇ ವೇಳೆ ಚಿತ್ರದುರ್ಗದಲ್ಲಿ ಶ್ರೀ ಬಸವ ಹರಳಯ್ಯ ಸ್ವಾಮೀಜಿ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿದ ಅವರು, ಕಿಡಿಗೇಡಿಗಳನ್ನು ಕೂಡಲೇ ಬಂಧಿಸಬೇಕು. ಮಠಕ್ಕೆ ಸೂಕ್ತ ರಕ್ಷಣೆ ನೀಡಬೇಕೆಂದು ಆಗ್ರಹಿಸಿದರು.

ಪತ್ರಕರ್ತ ಗಿರೀಶ್ ದೇಶಾಣಿ ಅವರು ಮಾತನಾಡಿ, ಡಾ.ಬಾಬು ಜಗಜೀವನ್ ರಾಂ ಅವರ ಪುಣ್ಯ ಸ್ಮರಣೆ ಹೆಸರಿನಲ್ಲಿ ಬೇಕಾಬಿಟ್ಟಿ ಬಿಲ್ ಮಾಡಿಕೊಳ್ಳಲು ಜನರನ್ನು ಸೇರಿಸಿಲ್ಲ. ಸರಳ ಕಾರ್ಯಕ್ರಮ ಮಾಡುವುದಾಗಿದ್ದರೆ ಸೌಂಡ್ ಸಿಸ್ಟಂ ಅಳವಡಿಸಿದ್ದು ಏಕೆ. ದೂದ್‌ಪೀರ್ ಅವರು ಸರ್ವಾಧಿಕಾರಿಯಂತೆ ವರ್ತಿಸುತ್ತಾರೆ. ಅವರ ವಿರುದ್ಧ ಶಿಸ್ತು ಕ್ರಮಕ್ಕೆ ಆಗ್ರಹಿಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಗುವುದೆಂದರು. ಸಮುದಾಯದ ಮುಖಂಡರಾದ ವೀರಭದ್ರಪ್ಪ, ವಸಂತಮ್ಮ, ತಿರುಮನಹಳ್ಳಿ ಮುನಿಸ್ವಾಮಿ, ಹೇಮಂತ್, ಜಯಕುಮಾರ್, ಎಸ್.ಡಿ. ಚಂದ್ರು, ಜಿ.ಎಂ. ಹಟ್ಟಿಗಯ್ಯ, ಶ್ರೀನಿವಾಸ್ ಇದ್ದರು.

# ವಯನಾಡ್ ಮಣ್ಣು ಕುಸಿತ: ಕಾರಣ ಪತ್ತೆಗೆ 2 ಪ್ರತ್ಯೇಕ ತನಿಖೆ

• ಪ್ರಜೋದಯ ವರದಿ



**ತಿರುವನಂತಪುರ:** ವಯನಾಡ್ ಜಿಲ್ಲೆಯಲ್ಲಿ ಸುರಂಗ ರಸ್ತೆ ನಿರ್ಮಾಣ ವೇಳೆ ಸಂಭವಿಸಿದ ಮಣ್ಣು ಕುಸಿತ ಅವಘಡ ಕುರಿತಂತೆ ರಾಜ್ಯ ಸರ್ಕಾರ ಎರಡು ಪ್ರತ್ಯೇಕ ತನಿಖೆಗಳನ್ನು ನಡೆಸಲಿದೆ ಎಂದು ಕೇರಳಂ ಮುಖ್ಯಮಂತ್ರಿ ವಿ.ಡಿ. ಸತೀಶನ್ ಅವರು ಬುಧವಾರ ಹೇಳಿದ್ದಾರೆ.

ಪರಿಸರ ಅನುಮೋದನೆ ನೀಡುವ ವೇಳೆ ಕೇಂದ್ರ ಸರ್ಕಾರ ವಿಧಿಸಿದ್ದ ಷರತ್ತುಗಳನ್ನು ಯೋಜನೆ ಗುತ್ತಿಗೆ ಪಡೆದಿರುವ ಕಂಪನಿಯು ಕಾಮಗಾರಿ ವೇಳೆ ಪಾಲನೆ ಮಾಡಿತ್ತೇ ಎಂಬುದು ಸೇರಿ ವಿವಿಧ ಆಯಾಮಗಳಲ್ಲಿ ತನಿಖೆ ನಡೆಸಲಾಗುವುದೆಂದು ಸಚಿವ ಸಂಪುಟ ಸಭೆ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಹೇಳಿದ್ದಾರೆ.

ಮಣ್ಣು ಕುಸಿತಕ್ಕೆ ಸಂಬಂಧಿಸಿದ ವರದಿಗಳನ್ನು ಪರಿಶೀಲಿಸಲು ಹಾಗೂ ಈ ಅವಘಡ ಸಂಭವಿ ಸಲು ಕಾರಣವಾದ ಅಂಶಗಳ ಪತ್ತೆಗೆ ತಾಂತ್ರಿಕ ಹಾಗೂ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳುವುದಕ್ಕೂ ಸರ್ಕಾರ ನಿರ್ಧರಿಸಿದೆ ಎಂದಿದ್ದಾರೆ. ಕಾಮಗಾರಿ ನಡೆಯುತ್ತಿರುವ ಸ್ಥಳದ ಮೇಲ್ಭಾಗದಲ್ಲಿ ಮಣ್ಣು ಕುಸಿತವಾಗಿದೆ ಎಂಬ ವರದಿಗಳಿವೆ. ಈ ಬಗ್ಗೆಯೂ ಪರಿಶೀಲನೆ ನಡೆಸಲಾಗುವುದೆಂದರು.

ಈ ಅವಘಡದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ತಕ್ಷಣವೇ ತಲಾ 5 ಲಕ್ಷ ಪರಿಹಾರ ನೀಡಲಾಗುವುದು. ಗಾಯಗೊಂಡವರ ಚಿಕಿತ್ಸೆಗೆ ತಗಲುವ ವೆಚ್ಚಗಳನ್ನು ಕೂಡ ಸರ್ಕಾರವೇ ಭರಿಸಲಿದೆ ಎಂದರು.

ವಯನಾಡ್ ಜಿಲ್ಲೆಯ ಕಲ್ಪಾಡಿ ಸಮೀಪ ಮಂಗಳವಾರ ಸಂಭವಿಸಿದ್ದ ಮಣ್ಣು ಕುಸಿತ ಅವಘಡದಲ್ಲಿ ಮೂವರು ಮೃತಪಟ್ಟು, ಇತರೆ ಐದು ಮಂದಿ ನಾಪತ್ತೆಯಾಗಿದ್ದರು. ಈ ಕುರಿತು ಚರ್ಚಿಸಲು ಸಚಿವ ಸಂಪುಟ ಸಭೆ ಕರೆಯಲಾಗಿತ್ತು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK